ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ.,
ಮಾಚೇನಹಳ್ಳಿ, ನಿದಿಗೆ(ಅಂಚೆ), ಶಿವಮೊಗ್ಗ-577 222
ದೂರವಾಣಿ: 08182-246161, 246162
e-mail: md_shimul@yahoo.com, shimuladmn@gmail.com, www.shimul.coop

ಸಂಖ್ಯೆ.ಶಿಮುಲ್/ಆಡಳಿತ-1/ನೇ.ನೇ-370/ 4438 /2025-26 ದಿನಾಂಕ: 14-11-2025

## ನೇಮಕಾತಿ ಪ್ರಕಟಣೆ

ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., ಶಿವಮೊಗ್ಗ ಇದರಲ್ಲಿ ಖಾಲಿ ಇರುವ ವಿವಿಧ ವೃಂದಗಳಲ್ಲಿನ ಒಟ್ಟು 194 ಹುದ್ದೆಗಳ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು **ಆನ್‌ಲೈನ್** ಮುಖಾಂತರ ಆಹ್ವಾನಿಸಲಾಗಿದೆ. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ. ಸಿಒ 147 ಸಿಸಿಬಿ 2022 ಬೆಂಗಳೂರು ದಿನಾಂಕ: 12.10.2022 ರಲ್ಲಿ ಅನುಮೋದಿಸಿದಂತೆ ನೇಮಕಾತಿಗೆ ಪ್ರಕಟಣೆ ಹೊರಡಿಸಿರುವ ಹುದ್ದೆಗಳ ಸಂಖ್ಯೆ, ಮೀಸಲಾತಿ ವರ್ಗೀಕರಣ, ವಿದ್ಯಾರ್ಹತೆ ಮತ್ತು ಅನುಭವ, ವಯೋಮಿತಿ, ವಯೋಮಿತಿ ಸಡಿಲಿಕೆ, ಲಿಖಿತ ಪರೀಕ್ಷೆ, ಅರ್ಜಿ ಶುಲ್ಕ, ಆಯ್ಕೆ ವಿಧಾನ, ಅರ್ಜಿ ನಮೂನೆ, ಸಲ್ಲಿಸಬೇಕಾದ ದಾಖಲೆಗಳು ಮತ್ತು ಅರ್ಜಿ ಸಲ್ಲಿಸುವ ವಿಧಾನ ಇತ್ಯಾದಿ ವಿವರಗಳು ಈ ಕೆಳಕಂಡಂತೆ ಇರುತ್ತವೆ.

**1) ಸಹಾಯಕ ವ್ಯವಸ್ಥಾಪಕರು(ಎಹೆಚ್/ಎಐ)**

**ವೇತನ ಶ್ರೇಣಿ ರೂ. 83700-155200** – **17 ಹುದ್ದೆಗಳು**

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ-ಎ | ಪ.ಜಾ.ಪ್ರ-ಬಿ | ಪ.ಜಾ.ಪ್ರ-ಸಿ | ಪ.ಪಂ | ಪ್ರವರ್ಗ-1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| ಇ-1 | ಇ-1 | ಇ-1 | ಇ-1<br>ಮ-1 | ಇ-1 | ಇ-1<br>ಮ-1 | ಇ-1 | ಇ-1 | - | ಇ-1<br>ಮ-3<br>ಗ್ರಾ-2<br>ಅಂ.ವಿ-1 |

**ವಿದ್ಯಾರ್ಹತೆ:** ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪಶುವೈದ್ಯಕೀಯ ವಿಜ್ಞಾನ ಮತ್ತು ಪಶು ಸಂಗೋಪನೆ ವಿಷಯದಲ್ಲಿ (ಬಿ.ವಿ.ಎಸ್ಸಿ ಅಂಡ್ ಎಹೆಚ್) ಪದವಿಯನ್ನು ಹೊಂದಿರಬೇಕು.

**2) ಸಹಾಯಕ ವ್ಯವಸ್ಥಾಪಕರು(ಆಡಳಿತ)**

**ವೇತನ ಶ್ರೇಣಿ ರೂ. 83700-155200** – **01 ಹುದ್ದೆ**

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ-ಎ | ಪ.ಜಾ.ಪ್ರ-ಬಿ | ಪ.ಜಾ.ಪ್ರ-ಸಿ | ಪ.ಪಂ | ಪ್ರವರ್ಗ-1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| - | - | - | - | - | - | - | - | - | ಇ-1 |

**ವಿದ್ಯಾರ್ಹತೆ:** ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಮಾನವ ಸಂಪನ್ಮೂಲ ವಿಷಯದಲ್ಲಿ 02 ವರ್ಷಗಳ ಪೂರ್ಣಾವಧಿ ಎಂಬಿಎ ಜೊತೆಗೆ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಆಡಳಿತ ನಿರ್ವಹಣೆಯಲ್ಲಿ 03 ವರ್ಷಗಳ ಸೇವಾನುಭವ ಹಾಗೂ ಕಂಪ್ಯೂಟರ್ ನಿರ್ವಹಣೆ ಜ್ಞಾನ ಹೊಂದಿರಬೇಕು.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..

3) **ಸಹಾಯಕ ವ್ಯವಸ್ಥಾಪಕರು(ಎಫ್ ಅಂಡ್ ಎಫ್)**

**ವೇತನ ಶ್ರೇಣಿ ರೂ. 83700–155200 – 03 ಹುದ್ದೆಗಳು**

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| – | – | – | – | – | ಗ್ರಾ–1 | – | – | ಇ–1 | ಗ್ರಾ–1 |

**ವಿದ್ಯಾರ್ಹತೆ:** ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಕೃಷಿ ವಿಜ್ಞಾನ ವಿಷಯದಲ್ಲಿ ಬಿ.ಎಸ್ಸಿ (ಕೃಷಿ) ಪದವಿ ಹೊಂದಿರಬೇಕು.

4) **ಎಂಐಎಸ್ / ಸಿಸ್ಟಂ ಆಫೀಸರ್**

**ವೇತನ ಶ್ರೇಣಿ ರೂ. 69250–134200 – 01 ಹುದ್ದೆ**

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| – | – | – | – | – | – | – | – | – | ಮ–1 |

**ವಿದ್ಯಾರ್ಹತೆ:** ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿಇ ಕಂಪ್ಯೂಟರ್ ಸೈನ್ಸ್ / ಇನ್‌ಫಾರ್ಮೇಷನ್ ಸೈನ್ಸ್ ಇಂಜಿನಿಯರಿಂಗ್ ಪದವಿಯನ್ನು ಹೊಂದಿರಬೇಕು.

5) **ಮಾರುಕಟ್ಟೆ ಅಧಿಕಾರಿ**

**ವೇತನ ಶ್ರೇಣಿ ರೂ. 69250–134200 – 02 ಹುದ್ದೆಗಳು**

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| – | – | – | ಇ–1 | – | – | – | – | – | ಇ–1 |

**ವಿದ್ಯಾರ್ಹತೆ:** ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿ.ಕಾಂ / ಬಿ.ಎಸ್ಸಿ / ಬಿಬಿಎಂ ಪದವಿ ಜೊತೆಗೆ ಹೆಸರಾಂತ ಸಂಸ್ಥೆಗಳಲ್ಲಿ ಮಾರುಕಟ್ಟೆಯಲ್ಲಿ 03 ವರ್ಷಗಳ ಅನುಭವದೊಂದಿಗೆ ಕಂಪ್ಯೂಟರ್ ನಿರ್ವಹಣೆ ಜ್ಞಾನ ಹೊಂದಿರಬೇಕು.

6) **ತಾಂತ್ರಿಕ ಅಧಿಕಾರಿ(ಅಭಿಯಂತರ)**

**ವೇತನ ಶ್ರೇಣಿ ರೂ. 69250–134200 ಒಟ್ಟು 02 ಹುದ್ದೆಗಳು**

I) **ತಾಂತ್ರಿಕ ಅಧಿಕಾರಿ(ಅಭಿಯಂತರ) – ಮೆಕಾನಿಕಲ್ – 01 ಹುದ್ದೆ**

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| – | – | – | – | – | – | – | – | – | ಗ್ರಾ–1 |

**ವಿದ್ಯಾರ್ಹತೆ:** ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿಇ (ಮೆಕಾನಿಕಲ್) ಪದವಿ ಹೊಂದಿರಬೇಕು.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ,ನಿ..

**II) ತಾಂತ್ರಿಕ ಅಧಿಕಾರಿ(ಅಭಿಯಂತರ) – ಎಲೆಕ್ಟ್ರಿಕಲ್ & ಎಲೆಕ್ಟ್ರಾನಿಕ್ಸ್ – 01 ಹುದ್ದೆ**

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| – | – | – | – | ಇ–1 | – | – | – | – | – |

**ವಿದ್ಯಾರ್ಹತೆ:** ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿಇ (ಎಲೆಕ್ಟ್ರಿಕಲ್ & ಎಲೆಕ್ಟ್ರಾನಿಕ್ಸ್) ಪದವಿ ಹೊಂದಿರಬೇಕು.

**7) ತಾಂತ್ರಿಕ ಅಧಿಕಾರಿ(ಗುಣನಿಯಂತ್ರಣ)**

**ವೇತನ ಶ್ರೇಣಿ ರೂ. 69250–134200 ಒಟ್ಟು 02 ಹುದ್ದೆಗಳು**

**I) ತಾಂತ್ರಿಕ ಅಧಿಕಾರಿ(ಗುಣನಿಯಂತ್ರಣ)–ಕೆಮಿಸ್ಟ್ರಿ – 01 ಹುದ್ದೆ**

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| – | – | – | – | – | – | – | – | – | ಮ–1 |

**ವಿದ್ಯಾರ್ಹತೆ:** ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಎಂ.ಎಸ್ಸಿ (ಕೆಮಿಸ್ಟ್ರಿ) ಸ್ನಾತಕೋತ್ತರ ಪದವಿಯೊಂದಿಗೆ ಕಂಪ್ಯೂಟರ್ ನಿರ್ವಹಣೆ ಜ್ಞಾನ ಹೊಂದಿರಬೇಕು.

**II) ತಾಂತ್ರಿಕ ಅಧಿಕಾರಿ(ಗುಣನಿಯಂತ್ರಣ)–ಮೈಕ್ರೊಬಯಾಲಜಿ – 01 ಹುದ್ದೆ**

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| – | – | – | – | – | ಇ–1 | – | – | – | – |

**ವಿದ್ಯಾರ್ಹತೆ:** ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಎಂ.ಎಸ್ಸಿ (ಮೈಕ್ರೊಬಯಾಲಜಿ) ಸ್ನಾತಕೋತ್ತರ ಪದವಿಯೊಂದಿಗೆ ಕಂಪ್ಯೂಟರ್ ನಿರ್ವಹಣೆ ಜ್ಞಾನ ಹೊಂದಿರಬೇಕು.

**8) ತಾಂತ್ರಿಕ ಅಧಿಕಾರಿ(ಡಿಟಿ)**

**ವೇತನ ಶ್ರೇಣಿ ರೂ. 69250–134200 – 14 ಹುದ್ದೆಗಳು**

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| ಇ–1 | ಇ–1 | ಇ–1 | ಮ–1 | – | ಮ–1<br>ಗ್ರಾ–1 | ಇ–1 | ಇ–1 | ಇ–1 | ಅಂ.ವಿ–1<br>ಮ–1<br>ಗ್ರಾ–2<br>ಇ–1 |

**ವಿದ್ಯಾರ್ಹತೆ:** ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿ.ಟೆಕ್ (ಡೈರಿ ಟೆಕ್ನಾಲಜಿ) ಪದವಿಯೊಂದಿಗೆ ಕಂಪ್ಯೂಟರ್ ನಿರ್ವಹಣೆ ಜ್ಞಾನ ಹೊಂದಿರಬೇಕು.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..
ಶಿವಮೊಗ್ಗ

9) ಕೆಮಿಸ್ಟ್ ದರ್ಜೆ-1

ವೇತನ ಶ್ರೇಣಿ ರೂ. 54175-99400 – 04 ಹುದ್ದೆಗಳು

I) ಕೆಮಿಸ್ಟ್ ದರ್ಜೆ-1 (ಕೆಮಿಸ್ಟ್ರಿ) – 02 ಹುದ್ದೆ

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ-ಎ | ಪ.ಜಾ.ಪ್ರ-ಬಿ | ಪ.ಜಾ.ಪ್ರ-ಸಿ | ಪ.ಪಂ | ಪ್ರವರ್ಗ-1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| ಇ-1 | – | – | – | – | – | – | – | – | ಇ-1 |

**ವಿದ್ಯಾರ್ಹತೆ:** ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪಡೆದ ಬಿ.ಎಸ್ಸಿ ಪದವಿಯಲ್ಲಿ ಕೆಮಿಸ್ಟ್ರಿ ವಿಷಯವನ್ನು ವ್ಯಾಸಂಗ ಮಾಡಿರಬೇಕು. ಕಂಪ್ಯೂಟರ್ ನಿರ್ವಹಣೆ ಜ್ಞಾನ ಹೊಂದಿರಬೇಕು ಹಾಗೂ ಡೇರಿ / ಆಹಾರ ಸಂಸ್ಕರಣಾ ಘಟಕಗಳಲ್ಲಿ ಕನಿಷ್ಠ 02 ವರ್ಷಗಳ ಅನುಭವ ಹೊಂದಿರಬೇಕು.

II) ಕೆಮಿಸ್ಟ್ ದರ್ಜೆ-1 (ಮೈಕ್ರೊಬಯಾಲಜಿ) – 02 ಹುದ್ದೆ

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ-ಎ | ಪ.ಜಾ.ಪ್ರ-ಬಿ | ಪ.ಜಾ.ಪ್ರ-ಸಿ | ಪ.ಪಂ | ಪ್ರವರ್ಗ-1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| – | – | – | ಇ-1 | – | – | – | – | – | ಮ-1 |

**ವಿದ್ಯಾರ್ಹತೆ:** ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪಡೆದ ಬಿ.ಎಸ್ಸಿ ಪದವಿಯಲ್ಲಿ ಮೈಕ್ರೊಬಯಾಲಜಿ ವಿಷಯವನ್ನು ವ್ಯಾಸಂಗ ಮಾಡಿರಬೇಕು. ಕಂಪ್ಯೂಟರ್ ನಿರ್ವಹಣೆ ಜ್ಞಾನ ಹೊಂದಿರಬೇಕು ಹಾಗೂ ಡೇರಿ / ಆಹಾರ ಸಂಸ್ಕರಣಾ ಘಟಕಗಳಲ್ಲಿ ಕನಿಷ್ಠ 02 ವರ್ಷಗಳ ಅನುಭವ ಹೊಂದಿರಬೇಕು.

10) ವಿಸ್ತರಣಾಧಿಕಾರಿ ದರ್ಜೆ-3

ವೇತನ ಶ್ರೇಣಿ ರೂ. 54175-99400 – 17 ಹುದ್ದೆಗಳು

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ-ಎ | ಪ.ಜಾ.ಪ್ರ-ಬಿ | ಪ.ಜಾ.ಪ್ರ-ಸಿ | ಪ.ಪಂ | ಪ್ರವರ್ಗ-1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| – | ಇ-1 | ಇ-1 | ಮ-1 | ಇ-1 | ಇ-1<br>ಮ-1<br>ಗ್ರಾ-1 | ಇ-1 | ಇ-1 | ಇ-1 | ಗ್ರಾ-3<br>ಅಂ.ವಿ-1<br>ಮ-2<br>ಇ-1 |

**ವಿದ್ಯಾರ್ಹತೆ:** ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಯಾವುದೇ ಪದವಿಯೊಂದಿಗೆ ಕಂಪ್ಯೂಟರ್ ನಿರ್ವಹಣೆ ಜ್ಞಾನ ಹೊಂದಿರಬೇಕು.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ.,
ಶಿವಮೊಗ್ಗ.-577222

11) ಆಡಳಿತ ಸಹಾಯಕ ದರ್ಜೆ–2

ವೇತನ ಶ್ರೇಣಿ ರೂ. 44425–83700 – 17 ಹುದ್ದೆಗಳು

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| ಇ–1 | ಇ–1 | ಇ–1 | ಇ–1 | ಇ–1 | ಇ–1<br>ಮ–1 | ಇ–1 | ಇ–1 | – | ಇ–2<br>ಮ–3<br>ಗ್ರಾ–2<br>ಅಂ.ವಿ–1 |

**ವಿದ್ಯಾರ್ಹತೆ:** ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಯಾವುದೇ ಪದವಿಯೊಂದಿಗೆ ಕಂಪ್ಯೂಟರ್ ನಿರ್ವಹಣೆ ಜ್ಞಾನ ಹೊಂದಿರಬೇಕು.

12) ಲೆಕ್ಕ ಸಹಾಯಕ ದರ್ಜೆ–2

ವೇತನ ಶ್ರೇಣಿ ರೂ. 44425–83700 – 12 ಹುದ್ದೆಗಳು

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| ಮ–1 | ಮ–1 | – | ಮ–1 | – | ಗ್ರಾ–1<br>ಅಂ.ವಿ–1<br>ಮ–1 | – | – | ಇ–1 | ಗ್ರಾ–2<br>ಮಾ.ಸೈ–1<br>ಮ–2 |

**ವಿದ್ಯಾರ್ಹತೆ:** ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿ.ಕಾಂ ಪದವಿಯೊಂದಿಗೆ ಟ್ಯಾಲಿ ಸರ್ಟಿಫಿಕೇಟ್ ಅಥವಾ ಕಂಪ್ಯೂಟರ್ ನಿರ್ವಹಣೆ ಜ್ಞಾನ ಹೊಂದಿರಬೇಕು.

13) ಮಾರುಕಟ್ಟೆ ಸಹಾಯಕ ದರ್ಜೆ–2

ವೇತನ ಶ್ರೇಣಿ ರೂ. 44425–83700 – 10 ಹುದ್ದೆಗಳು

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| – | – | ಮ–1 | ಗ್ರಾ–1<br>ಅಂ.ವಿ–1 | ಮ–1 | ಗ್ರಾ–1 | ಮ–1 | – | – | ಕ.ಮಾ.ಅ–1<br>ಮ–1<br>ಗ್ರಾ–1<br>ಯೋ.ಅ–1 |

**ವಿದ್ಯಾರ್ಹತೆ:** ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿಬಿಎಂ / ಬಿ.ಎಸ್ಸಿ / ಬಿ.ಕಾಂ ಪದವಿಯೊಂದಿಗೆ ಕಂಪ್ಯೂಟರ್ ನಿರ್ವಹಣೆ ಜ್ಞಾನ ಹೊಂದಿರಬೇಕು.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..
ಶಿವಮೊಗ್ಗ.-577222

ಶಿಮುಲ್

14) ಕೆಮಿಸ್ಟ್ ದರ್ಜೆ–2

ವೇತನ ಶ್ರೇಣಿ ರೂ. 44425–83700 ಒಟ್ಟು 28 ಹುದ್ದೆಗಳು

I) ಕೆಮಿಸ್ಟ್ ದರ್ಜೆ–2 (ಕೆಮಿಸ್ಟ್ರಿ) – 20 ಹುದ್ದೆಗಳು

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| ಗ್ರಾ–1<br>ಅಂ.ವಿ–1 | ಗ್ರಾ–1 | ಗ್ರಾ–1 | ಮ–1 | ಗ್ರಾ–1 | ಇ–1<br>ಮ–1<br>ಗ್ರಾ–1 | ಗ್ರಾ–1 | ಮ–1 | ಮ–1 | ಮ–2<br>ತೃ.ಲಿಂ–1<br>ಮಾ.ಸೈ–1<br>ಇ–2<br>ಗ್ರಾ–1<br>ಅಂ.ವಿ–1 |

ವಿದ್ಯಾರ್ಹತೆ: ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪಡೆದ ಬಿ.ಎಸ್ಸಿ ಪದವಿಯಲ್ಲಿ ಕೆಮಿಸ್ಟ್ರಿ ಒಂದು ವಿಷಯವನ್ನಾಗಿ ವ್ಯಾಸಂಗ ಮಾಡಿರುವುದರ ಜೊತೆಗೆ ಕಂಪ್ಯೂಟರ್ ನಿರ್ವಹಣೆ ಜ್ಞಾನ ಹೊಂದಿರಬೇಕು.

II) ಕೆಮಿಸ್ಟ್ ದರ್ಜೆ–2 (ಮೈಕ್ರೊಬಯಾಲಜಿ) – 08 ಹುದ್ದೆಗಳು

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| – | ಮ–1 | ಅಂ.ವಿ–1 | – | – | ಮಾ.ಸೈ–1 | – | – | ಗ್ರಾ–1 | ಮ–2<br>ಗ್ರಾ–2 |

ವಿದ್ಯಾರ್ಹತೆ: ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪಡೆದ ಬಿ.ಎಸ್ಸಿ ಪದವಿಯಲ್ಲಿ ಮೈಕ್ರೊಬಯಾಲಜಿ ವಿಷಯವನ್ನಾಗಿ ವ್ಯಾಸಂಗ ಮಾಡಿರುವುದರ ಜೊತೆಗೆ ಕಂಪ್ಯೂಟರ್ ನಿರ್ವಹಣೆ ಜ್ಞಾನ ಹೊಂದಿರಬೇಕು.

15) ಕಿರಿಯ ಸಿಸ್ಟಂ ಆಪರೇಟರ್

ವೇತನ ಶ್ರೇಣಿ ರೂ. 44425–83700 – 13 ಹುದ್ದೆಗಳು

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| ಮ–1 | – | – | ಗ್ರಾ–1<br>ಇ–1 | ಅಂ.ವಿ–1 | ಮ–2 | – | ಗ್ರಾ–1 | – | ಮಾ.ಸೈ–1<br>ಇ–1<br>ಮ–2<br>ಗ್ರಾ–1<br>ಕ.ಮಾ.ಅ–1 |

ವಿದ್ಯಾರ್ಹತೆ: ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಯಾವುದೇ ಪದವಿಯೊಂದಿಗೆ ಕನಿಷ್ಟ ಒಂದು ವರ್ಷದ ಡಿಪ್ಲೋಮಾ ಇನ್ ಕಂಪ್ಯೂಟರ್ ಅಪ್ಲಿಕೇಷನ್ ಕೋರ್ಸ್ ಹಾಗೂ 03 ವರ್ಷಗಳ ಅನುಭವ ಹೊಂದಿರಬೇಕು.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..

16) ಶೀಘ್ರಲಿಪಿಗಾರರು ದರ್ಜೆ–2

ವೇತನ ಶ್ರೇಣಿ ರೂ. 44425–83700 – 01 ಹುದ್ದೆ

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| – | ಅಂ.ವಿ–1 | – | – | – | – | – | – | – | – |

ವಿದ್ಯಾರ್ಹತೆ: ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಯಾವುದೇ ಪದವಿಯೊಂದಿಗೆ ಸೀನಿಯರ್ ಇಂಗ್ಲೀಷ್ ಮತ್ತು ಕನ್ನಡ ಶಾರ್ಟ್ ಹ್ಯಾಂಡ್‌ನೊಂದಿಗೆ ಕಂಪ್ಯೂಟರ್ ಆಫೀಸ್ ಪ್ಯಾಕೇಜ್ ನಿರ್ವಹಣೆಗಳ ಜ್ಞಾನ ಹೊಂದಿರಬೇಕು.

17) ಕಿರಿಯ ತಾಂತ್ರಿಕರು

ವೇತನ ಶ್ರೇಣಿ ರೂ. 34100–67600 ಒಟ್ಟು 50 ಹುದ್ದೆಗಳು

I) ಕಿರಿಯ ತಾಂತ್ರಿಕರು (ಎಲೆಕ್ಟ್ರಿಕಲ್) – 22 ಹುದ್ದೆಗಳು

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| ಇ–1 | ಇ–1 | ಇ–1 | ಇ–1<br>ಮ–1 | ಇ–1 | ಇ–1<br>ಮ–1<br>ಗ್ರಾ–1 | ಇ–1 | ಇ–1 | ಇ–1 | ಇ–2<br>ಮ–3<br>ಗ್ರಾ–3<br>ಅಂ.ವಿ–1<br>ಮಾ.ಸೈ–1 |

ವಿದ್ಯಾರ್ಹತೆ: ಎಸ್.ಎಸ್.ಎಲ್.ಸಿ ಯೊಂದಿಗೆ ಡೈರೆಕ್ಟೋರೇಟ್ ಜನರಲ್ ಆಫ್ ಎಂಪ್ಲಾಯ್‌ಮೆಂಟ್ ಅಂಡ್ ಟ್ರೈನಿಂಗ್ ಇವರಿಂದ ಎಲೆಕ್ಟ್ರಿಕಲ್ ಟ್ರೇಡ್‌ನಲ್ಲಿ ತೇರ್ಗಡೆ ಹೊಂದಿ ಕಡ್ಡಾಯವಾಗಿ ನ್ಯಾಷನಲ್ ಟ್ರೇಡ್ ಸರ್ಟಿಫಿಕೇಟ್ (ಎನ್.ಟಿ.ಸಿ) ಅಥವಾ ಪ್ರಾವಿಜನಲ್ ನ್ಯಾಷನಲ್ ಟ್ರೇಡ್ ಸರ್ಟಿಫಿಕೇಟ್ ಅಥವಾ ನ್ಯಾಷನಲ್ ಕೌನ್ಸಿಲ್ ಫಾರ್ ವೆಕೇಷನಲ್ ಟ್ರೈನಿಂಗ್ (ಎನ್.ಸಿ.ವಿ.ಟಿ) ಸರ್ಟಿಫಿಕೇಟ್ ಪಡೆದಿರಬೇಕು.

II) ಕಿರಿಯ ತಾಂತ್ರಿಕರು (ರೆಫ್ರಿಜರೇಷನ್) – 10 ಹುದ್ದೆಗಳು

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| ಮ–1 | ಮ–1 | – | ಗ್ರಾ–1 | ಮ–1 | ಅಂ.ವಿ–1<br>ಮ–1 | – | – | – | ಮ–2<br>ಗ್ರಾ–1<br>ಕ.ಮಾ.ಅ–1 |

ವಿದ್ಯಾರ್ಹತೆ: ಎಸ್.ಎಸ್.ಎಲ್.ಸಿ ಯೊಂದಿಗೆ ಡೈರೆಕ್ಟೋರೇಟ್ ಜನರಲ್ ಆಫ್ ಎಂಪ್ಲಾಯ್‌ಮೆಂಟ್ ಅಂಡ್ ಟ್ರೈನಿಂಗ್ ಇವರಿಂದ ರೆಫ್ರಿಜರೇಷನ್(ಎಂ.ಆರ್.ಎ.ಸಿ) ಟ್ರೇಡ್‌ನಲ್ಲಿ ತೇರ್ಗಡೆ ಹೊಂದಿ ಕಡ್ಡಾಯವಾಗಿ ನ್ಯಾಷನಲ್ ಟ್ರೇಡ್ ಸರ್ಟಿಫಿಕೇಟ್ (ಎನ್.ಟಿ.ಸಿ) ಅಥವಾ ಪ್ರಾವಿಜನಲ್ ನ್ಯಾಷನಲ್ ಟ್ರೇಡ್ ಸರ್ಟಿಫಿಕೇಟ್ ಅಥವಾ ನ್ಯಾಷನಲ್ ಕೌನ್ಸಿಲ್ ಫಾರ್ ವೆಕೇಷನಲ್ ಟ್ರೈನಿಂಗ್ (ಎನ್.ಸಿ.ವಿ.ಟಿ) ಸರ್ಟಿಫಿಕೇಟ್ ಪಡೆದಿರಬೇಕು.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ.,

## III) ಕಿರಿಯ ತಾಂತ್ರಿಕರು (ಬಾಯ್ಲರ್ ಅಟೆಂಡೆಂಟ್) – 12 ಹುದ್ದೆಗಳು

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| ಗ್ರಾ–1 | – | ಮ–1 | ಅಂ.ವಿ–1 | – | ಗ್ರಾ–1 | ಮ–1 | – | ಮ–1 | ಮ–2<br>ಗ್ರಾ–1<br>ಯೋ.ಅ–1<br>ತೃ.ಲಿಂ–1<br>ಮಾ.ಸೈ–1 |

**ವಿದ್ಯಾರ್ಹತೆ:** ಎಸ್.ಎಸ್.ಎಲ್.ಸಿ ಯೊಂದಿಗೆ ನಿರ್ದೇಶಕರು, ಬಾಯ್ಲರ್ ಮತ್ತು ಕಾರ್ಖಾನೆ ಇವರಿಂದ ಬಾಯ್ಲರ್ ಅಟೆಂಡೆಂಟ್ ದರ್ಜೆ–2 ರ ಪ್ರಮಾಣ ಪತ್ರ ಪಡೆದಿರಬೇಕು ಅಥವಾ ಎಸ್.ಎಸ್.ಎಲ್.ಸಿ ಯೊಂದಿಗೆ ಬಾಯ್ಲರ್ ಅಟೆಂಡೆಂಟ್ ಟ್ರೇಡ್‌ನಲ್ಲಿ ಪ್ರಾವಿಜನಲ್ / ನ್ಯಾಷನಲ್ ಶಿಶಿಕ್ಷು ಪ್ರಮಾಣ ಪತ್ರ ಹೊಂದಿರಬೇಕು.

## IV) ಕಿರಿಯ ತಾಂತ್ರಿಕರು (ಫಿಟ್ಟರ್) – 04 ಹುದ್ದೆಗಳು

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| – | ಗ್ರಾ–1 | – | – | – | ಇ–1 | – | ಮ–1 | – | ಇ–1 |

**ವಿದ್ಯಾರ್ಹತೆ:** ಎಸ್.ಎಸ್.ಎಲ್.ಸಿ ಯೊಂದಿಗೆ ಡೈರೆಕ್ಟೋರೇಟ್ ಜನರಲ್ ಆಫ್ ಎಂಪ್ಲಾಯ್‌ಮೆಂಟ್ ಅಂಡ್ ಟ್ರೈನಿಂಗ್ ಇವರಿಂದ ಫಿಟ್ಟರ್ ಟ್ರೇಡ್‌ನಲ್ಲಿ ತೇರ್ಗಡೆ ಹೊಂದಿ ಕಡ್ಡಾಯವಾಗಿ ನ್ಯಾಷನಲ್ ಟ್ರೇಡ್ ಸರ್ಟಿಫಿಕೇಟ್ (ಎನ್.ಟಿ.ಸಿ) ಅಥವಾ ಪ್ರಾವಿಜನಲ್ ನ್ಯಾಷನಲ್ ಟ್ರೇಡ್ ಸರ್ಟಿಫಿಕೇಟ್ ಅಥವಾ ನ್ಯಾಷನಲ್ ಕೌನ್ಸಿಲ್ ಫಾರ್ ವೊಕೇಷನಲ್ ಟ್ರೈನಿಂಗ್ (ಎನ್.ಸಿ.ವಿ.ಟಿ) ಸರ್ಟಿಫಿಕೇಟ್ ಪಡೆದಿರಬೇಕು.

## V) ಕಿರಿಯ ತಾಂತ್ರಿಕರು (ವೆಲ್ಡರ್) – 02 ಹುದ್ದೆಗಳು

| ಮೀಸಲಾತಿ ವರ್ಗೀಕರಣ | | | | | | | | | |
|---|---|---|---|---|---|---|---|---|---|
| ಪ.ಜಾ.ಪ್ರ–ಎ | ಪ.ಜಾ.ಪ್ರ–ಬಿ | ಪ.ಜಾ.ಪ್ರ–ಸಿ | ಪ.ಪಂ | ಪ್ರವರ್ಗ–1 | 2ಎ | 2ಬಿ | 3ಎ | 3ಬಿ | ಸಾಮಾನ್ಯ |
| – | – | ಗ್ರಾ–1 | – | – | – | – | – | – | ಮ–1 |

**ವಿದ್ಯಾರ್ಹತೆ:** ಎಸ್.ಎಸ್.ಎಲ್.ಸಿ ಯೊಂದಿಗೆ ಡೈರೆಕ್ಟೋರೇಟ್ ಜನರಲ್ ಆಫ್ ಎಂಪ್ಲಾಯ್‌ಮೆಂಟ್ ಅಂಡ್ ಟ್ರೈನಿಂಗ್ ಇವರಿಂದ ವೆಲ್ಡರ್ ಟ್ರೇಡ್‌ನಲ್ಲಿ ತೇರ್ಗಡೆ ಹೊಂದಿ ಕಡ್ಡಾಯವಾಗಿ ನ್ಯಾಷನಲ್ ಟ್ರೇಡ್ ಸರ್ಟಿಫಿಕೇಟ್ (ಎನ್.ಟಿ.ಸಿ) ಅಥವಾ ಪ್ರಾವಿಜನಲ್ ನ್ಯಾಷನಲ್ ಟ್ರೇಡ್ ಸರ್ಟಿಫಿಕೇಟ್ ಅಥವಾ ನ್ಯಾಷನಲ್ ಕೌನ್ಸಿಲ್ ಫಾರ್ ವೊಕೇಷನಲ್ ಟ್ರೈನಿಂಗ್ (ಎನ್.ಸಿ.ವಿ.ಟಿ) ಸರ್ಟಿಫಿಕೇಟ್ ಪಡೆದಿರಬೇಕು.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ.,
ಶಿವಮೊಗ್ಗ.-577222

## I–ಸಾಮಾನ್ಯ ಸೂಚನೆಗಳು:

1) **ಸೂಚನೆಗಳು:**

ಎ) ಮೇಲಿನ ಹುದ್ದೆಗಳಲ್ಲಿ ಸಹಾಯಕ ವ್ಯವಸ್ಥಾಪಕರು(ಎಹೆಚ್/ಎಐ), ಸಹಾಯಕ ವ್ಯವಸ್ಥಾಪಕರು(ಎಫ್‌ಅಂಡ್‌ಎಫ್) ಮತ್ತು ಕಿರಿಯ ತಾಂತ್ರಿಕ ಹುದ್ದೆಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಹುದ್ದೆಗಳ ನೇಮಕಾತಿಗೆ ಅಭ್ಯರ್ಥಿಗಳು ಕಂಪ್ಯೂಟರ್ ಆಪರೇಶನ್ಸ್ ಮತ್ತು ಅಪ್ಲಿಕೇಷನ್ಸ್‌ನಲ್ಲಿ ಜ್ಞಾನವನ್ನು ಕಡ್ಡಾಯವಾಗಿ ಹೊಂದಿರತಕ್ಕದ್ದು ಹಾಗೂ ಕಂಪ್ಯೂಟರ್ ಸರ್ಟಿಫಿಕೇಟ್ ತರಬೇತಿ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು. ಪರಂತು ಪದವಿಯಲ್ಲಿ ಕನಿಷ್ಠ ಒಂದು ವಿಷಯದಲ್ಲಿ ಕಂಪ್ಯೂಟರ್ ಅಧ್ಯಯನ ಮಾಡಿದಲ್ಲಿ ಕಂಪ್ಯೂಟರ್ ಸರ್ಟಿಫಿಕೇಟ್ ಸಲ್ಲಿಸಲು ವಿನಾಯಿತಿ ನೀಡಲಾಗುವುದು.

ಬಿ) ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಮೇಲಿನ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:

| | |
|---|---|
| **ಪ.ಜಾ.ಪ್ರ–ಎ** | ಪರಿಶಿಷ್ಟ ಜಾತಿ ಪ್ರವರ್ಗ–ಎ |
| **ಪ.ಜಾ.ಪ್ರ–ಬಿ** | ಪರಿಶಿಷ್ಟ ಜಾತಿ ಪ್ರವರ್ಗ–ಬಿ |
| **ಪ.ಜಾ.ಪ್ರ–ಸಿ** | ಪರಿಶಿಷ್ಟ ಜಾತಿ ಪ್ರವರ್ಗ–ಸಿ |
| **ಪ.ಪಂ** | ಪರಿಶಿಷ್ಟ ಪಂಗಡ |
| **ಪ್ರ–1** | ಪ್ರವರ್ಗ 1 |
| **2ಎ** | ಪ್ರವರ್ಗ 2 ಎ |
| **2ಬಿ** | ಪ್ರವರ್ಗ 2 ಬಿ |
| **3ಎ** | ಪ್ರವರ್ಗ 3 ಎ |
| **3ಬಿ** | ಪ್ರವರ್ಗ 3 ಬಿ |

| | |
|---|---|
| **ಇ** | ಇತರೆ |
| **ಮ** | ಮಹಿಳಾ |
| **ಮಾ.ಸೈ** | ಮಾಜಿ ಸೈನಿಕ |
| **ಗ್ರಾ** | ಗ್ರಾಮೀಣ |
| **ಕ.ಮಾ.ಅ** | ಕನ್ನಡ ಮಾಧ್ಯಮ ಅಭ್ಯರ್ಥಿ |
| **ಅಂ.ವಿ.** | ಅಂಗವಿಕಲ |
| **ಯೋ.ಅ.** | ಯೋಜನಾ ನಿರಾಶ್ರಿತ ಅಭ್ಯರ್ಥಿ |
| **ತೃ.ಲಿಂ** | ತೃತೀಯ ಲಿಂಗ |

ಸಿ) ಮಹಿಳೆ/ಗ್ರಾಮೀಣ/ಕನ್ನಡ ಮಾಧ್ಯಮ/ಯೋಜನಾ ನಿರಾಶ್ರಿತ/ಮಾಜಿ ಸೈನಿಕ/ತೃತೀಯ ಲಿಂಗ ಅಭ್ಯರ್ಥಿಗಳಿಗೆ ಮೀಸಲಿರಿಸಿದ ರಿಕ್ತ ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ರಿಕ್ತ ಸ್ಥಾನಗಳನ್ನು ಆಯಾ ವರ್ಗಕ್ಕೆ ಸೇರಿದ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ಡಿ) ಒಕ್ಕೂಟದಲ್ಲಿ ಖಾಲಿ ಇರುವ ಈ ಮೇಲಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಂಬಂಧ ನೇಮಕಾತಿ ಪ್ರಕ್ರಿಯೆಯ ಪೂರ್ಣ ವಿವರಗಳನ್ನು ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., (ಶಿಮುಲ್) ಶಿವಮೊಗ್ಗ ಇದರ ಜಾಲತಾಣದಲ್ಲಿ (WEBSITE) www.shimul.coop ನಲ್ಲಿ ಲಭ್ಯವಿದ್ದು, ಅಭ್ಯರ್ಥಿಗಳು ಕಡ್ಡಾಯವಾಗಿ ತಾಕ್ಷಣಿಕ ಸೇವೆಯ (ONLINE) ಮೂಲಕ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.

ಇ) ಅಭ್ಯರ್ಥಿಗಳು ಭಾರತೀಯ ನಾಗರೀಕನಾಗಿರತಕ್ಕದ್ದು.

ಎಫ್) ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದೇ ಅರ್ಜಿ ಸಲ್ಲಿಸತಕ್ಕದ್ದು. ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಮೊದಲು ಸಲ್ಲಿಸಿದ ಅರ್ಜಿಯನ್ನು ಮಾತ್ರ ಮಾನ್ಯ ಮಾಡಲಾಗುವುದು.

ಜಿ) ಒಂದಕ್ಕಿಂತ ಹೆಚ್ಚಿನ ವೃಂದದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ ಅಂತಹ ಅಭ್ಯರ್ಥಿಗಳು ಒಂದೇ **ನೊಂದಣಿ ಸಂಖ್ಯೆಯಡಿಯಲ್ಲಿಯೇ** ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಶುಲ್ಕವನ್ನು ಪಾವತಿಸಿ, ಪ್ರತ್ಯೇಕ ಅರ್ಜಿ ಸಲ್ಲಿಸತಕ್ಕದ್ದು.

ಹೆಚ್) ನೇಮಕಾತಿ ಅರ್ಜಿಗಳನ್ನು ಖುದ್ದಾಗಿ / ಅಂಚೆ / ಕೋರಿಯರ್ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ. ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ವ್ಯವಸ್ಥಾಪಕ ನಿರ್ದೇಶಕರು**
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ.,
ಶಿವಮೊಗ್ಗ.-577222

ಐ) **ಅಭ್ಯರ್ಥಿಗಳು ಎಲ್ಲಾ ದಾಖಲೆಗಳನ್ನು ಸ್ಪಷ್ಟವಾಗಿ ಕಾಣುವಂತೆ ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ. ಆನ್‌ಲೈನ್ ಮೂಲಕ ಸಲ್ಲಿಸುವ ಅರ್ಜಿಗಳಲ್ಲಿ ಅಪೂರ್ಣ ಹಾಗೂ ಅಸ್ಪಷ್ಟ ದಾಖಲೆಗಳನ್ನು ಅಥವಾ ಮಾಹಿತಿಗಳನ್ನು ನೀಡಿದ್ದಲ್ಲಿ, ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

ಜೆ) ನಿಗದಿತ ಶುಲ್ಕ ಸಂದಾಯ ಮಾಡದಿದ್ದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಕೆ) ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ.

ಎಲ್) ಒಕ್ಕೂಟದ ಈ ನೇಮಕಾತಿ ಪ್ರಕಟಣೆಯಲ್ಲಿ ಸೂಚನೆಗಳನ್ನು ಪೂರ್ಣವಾಗಿ ತಿಳಿಯದೆ ಅಭ್ಯರ್ಥಿಗಳು ತಪ್ಪೆಸಗಿದಲ್ಲಿ, ಒಕ್ಕೂಟವು ಜವಾಬ್ದಾರರಾಗಿರುವುದಿಲ್ಲ.

ಎಂ) ಈ ನೇಮಕಾತಿ ಸಂಬಂಧ ಅಭ್ಯರ್ಥಿಗಳು ಸ್ಪಷ್ಟೀಕರಣ, ಪ್ರಶ್ನೋತ್ತರಗಳು, ತಕರಾರು ಇತ್ಯಾದಿಗಳಿಗೆ ಪತ್ರ / ಇ-ಮೇಲ್ ವ್ಯವಹಾರಗಳಿಗೆ ಯಾವುದೇ ಅವಕಾಶವಿರುವುದಿಲ್ಲ.

2) **ಅರ್ಜಿ ಶುಲ್ಕ:**

| | | |
|---|---|---|
| 1 | ಪರಿಶಿಷ್ಟ ಜಾತಿ ಪ್ರವರ್ಗ-ಎ, ಪರಿಶಿಷ್ಟ ಜಾತಿ ಪ್ರವರ್ಗ-ಬಿ, ಪರಿಶಿಷ್ಟ ಜಾತಿ ಪ್ರವರ್ಗ-ಸಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳು ಪಾವತಿಸಬೇಕಾದ ಶುಲ್ಕ | ಅರ್ಜಿ ಶುಲ್ಕ ರೂ. 500/- (ಬ್ಯಾಂಕ್ ಶುಲ್ಕ ಪ್ರತ್ಯೇಕ) |
| 2 | ಇತರೆ ವರ್ಗದ ಅಭ್ಯರ್ಥಿಗಳು ಪಾವತಿಸಬೇಕಾದ ಶುಲ್ಕ | ಅರ್ಜಿ ಶುಲ್ಕ ರೂ. 1000/- (ಬ್ಯಾಂಕ್ ಶುಲ್ಕ ಪ್ರತ್ಯೇಕ) |

- ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡಲು Online ನಲ್ಲಿ ನೀಡಿರುವ ಸೂಚನೆಗಳನ್ನು ತಪ್ಪದೇ ಪಾಲಿಸುವುದು.
- ತಪ್ಪು ಮಾಹಿತಿಗಳನ್ನು ಮತ್ತು ಅಸ್ಪಷ್ಟ ಮಾಹಿತಿ ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹವರ ಅರ್ಜಿಯನ್ನು ಯಾವುದೇ ಕಾರಣ ನೀಡದೇ ತಿರಸ್ಕರಿಸಲಾಗುವುದು.
- ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ ಅಂತಹ ಅಭ್ಯರ್ಥಿಗಳು ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಿ, ಪ್ರತ್ಯೇಕವಾಗಿ ಅರ್ಜಿ ಶುಲ್ಕವನ್ನು ಪಾವತಿಸತಕ್ಕದ್ದು.
- ಅರ್ಜಿ ಶುಲ್ಕವನ್ನು ಪಾವತಿಸುವುದಕ್ಕೆ ಡೆಬಿಟ್ ಕಾರ್ಡ್ / ಕ್ರೆಡಿಟ್ ಕಾರ್ಡ್ / ಆನ್‌ಲೈನ್ ಮೂಲಕ ನಿಗದಿತ ಶುಲ್ಕ + ಅನ್ವಯಿಸುವ ಬ್ಯಾಂಕ್ ಶುಲ್ಕ ಪ್ರತ್ಯೇಕ ಪಾವತಿ ಮಾಡತಕ್ಕದ್ದು.
- ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ **ದಿನಾಂಕ: 14-12-2025** ರ ನಂತರ ಶುಲ್ಕವನ್ನು ಸಂದಾಯ ಮಾಡಿದ್ದಲ್ಲಿ ಅಂತಹವರ ಅರ್ಜಿಯನ್ನು ತಿರಸ್ಕರಿಸಲಾಗುವುದು. ಡಿ.ಡಿ / ಚೆಕ್ / ಪೋಸ್ಟಲ್ ಆರ್ಡರ್ / ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.
- ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ಕಾಯದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸುವುದು.
- ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹವರ ವಿರುದ್ಧ ಒಕ್ಕೂಟವು ಕಾನೂನಿನನ್ವಯ ಸೂಕ್ತ ಕ್ರಮಕೈಗೊಳ್ಳುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ.
- ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಇತರೆ ಯಾವುದೇ ನೇಮಕಾತಿಗಳಿಗೆ ಹೊಂದಾಣಿಕೆ ಮಾಡಿಕೊಳ್ಳಲಾಗುವುದಿಲ್ಲ.

**ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ: 14-11-2025**
**ಅರ್ಜಿ ಸಲ್ಲಿಸಲು ಮತ್ತು ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ: 14-12-2025**

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ.,
ಶಿವಮೊಗ್ಗ-577222

1) ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನೇಮಕಾತಿ ಪ್ರಕಟಣೆಯಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರಲೇಬೇಕು. ಒಕ್ಕೂಟದ ಅನುಮೋದಿತ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊರತುಪಡಿಸಿ ಇತರೆ ಯಾವುದೇ ಸಮಾನಾಂತರ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ.
2) ಕನ್ನಡ ಭಾಷಾ ಜ್ಞಾನ (ಓದುವುದು, ಬರೆಯುವುದು ಮತ್ತು ಮಾತನಾಡುವುದು) ಕಡ್ಡಾಯವಾಗಿರುತ್ತದೆ.
3) ಆಯ್ಕೆಗೊಂಡ ಅಭ್ಯರ್ಥಿಗಳಿಗೆ ಪರೀಕ್ಷಾರ್ಥವಧಿ, ಒಕ್ಕೂಟವು ನಿಗದಿಪಡಿಸಿದಂತೆ ಇರುತ್ತದೆ. ಅವಶ್ಯವಿದ್ದಲ್ಲಿ ಪರೀಕ್ಷಾರ್ಥವಧಿಯನ್ನು ವಿಸ್ತರಿಸಲಾಗುವುದು. ಪರೀಕ್ಷಾವಧಿಯಲ್ಲಿ ಅಭ್ಯರ್ಥಿಗಳ ಸೇವೆ ತೃಪ್ತಿಕರವಾಗಿದ್ದಲ್ಲಿ ಮಾತ್ರ ಅಂತಹವರ ಸೇವೆಯನ್ನು ಖಾಯಂಗೊಳಿಸಲಾಗುವುದು.
4) ಅರ್ಜಿಯಲ್ಲಿ ನಮೂದಿಸಿದ ಅಂಕಪಟ್ಟಿ / ಇತರೆ ದಾಖಲಾತಿಗಳಲ್ಲಿ ಯಾವುದೇ ವ್ಯತ್ಯಾಸ ಕಂಡುಬಂದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ಈ ನೇಮಕಾತಿ ಪ್ರಕಟಣೆಯನ್ನು ಯಾವುದೇ ಕಾರಣ ನೀಡದೆ ಯಾವುದೇ ಹಂತದಲ್ಲಿ ಹಿಂದಕ್ಕೆ ಪಡೆಯುವ / ರದ್ದುಪಡಿಸುವ ಅಧಿಕಾರವನ್ನು ಒಕ್ಕೂಟವು ಹೊಂದಿರುತ್ತದೆ. ಅಭ್ಯರ್ಥಿಗಳು ಆಯ್ಕೆಯಾದ ನಂತರ ಸಲ್ಲಿಸಿರುವ ದಾಖಲಾತಿಗಳ ನೈಜತೆಯನ್ನು ಸಂಬಂಧಪಟ್ಟ ಸಂಸ್ಥೆ / ಪ್ರಾಧಿಕಾರ / ವಿಶ್ವವಿದ್ಯಾನಿಲಯಗಳಿಂದ ದೃಢೀಕರಿಸಿಕೊಳ್ಳುವ ಹಕ್ಕನ್ನು ಒಕ್ಕೂಟವು ಕಾಯ್ದಿರಿಸಿಕೊಂಡಿದೆ.
5) ಅನುಭವ ಅಗತ್ಯವಿರುವ ಹುದ್ದೆಗಳಿಗೆ ಅಗತ್ಯ ವಿದ್ಯಾರ್ಹತೆಯನ್ನು ಪಡೆದ ನಂತರ ಹೊಂದಿರುವ ಆಯಾ ಕ್ಷೇತ್ರ / ಹುದ್ದೆಗೆ ಸಂಬಂಧಪಟ್ಟ ನಿರ್ದಿಷ್ಠ ಅನುಭವವನ್ನು ಮಾತ್ರ ಪರಿಗಣಿಸಲಾಗುವುದು. ಸೇವಾನುಭವ ದೃಢೀಕರಣ ಪತ್ರವನ್ನು ಸಲ್ಲಿಸುವವರು ಉದ್ಯೋಗದಾತರಿಂದ ಪಡೆದ ಸೇವಾ ದೃಢೀಕರಣ ಪತ್ರವನ್ನು ಕಡ್ಡಾಯವಾಗಿ ONLINE ನಲ್ಲಿ ಅಪ್‌ಲೋಡ್ ಮಾಡುವುದು ಹಾಗೂ ಮೂಲ ದಾಖಲಾತಿಗಳ ಪರಿಶೀಲನೆ ವೇಳೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
6) ಅಭ್ಯರ್ಥಿಗಳು On-Line ಮೂಲಕ ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳ ಪ್ರತಿಯನ್ನು ಅಪ್‌ಲೋಡ್ ಮಾಡತಕ್ಕದ್ದು. ವ್ಯಕ್ತಿತ್ವ ಪರೀಕ್ಷೆಗೆ ಹಾಜರಾಗುವ ಅರ್ಹ ಅಭ್ಯರ್ಥಿಗಳು ತಾವು ಸಲ್ಲಿಸಿದ ಎಲ್ಲಾ ಪ್ರಮಾಣ ಪತ್ರಗಳ ಮೂಲಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು.
7) ಈ ನೇಮಕಾತಿ ಪ್ರಕಟಣೆಯು ಘನ ನ್ಯಾಯಾಲಯದ ಆದೇಶ / ನಿರ್ದೇಶನಗಳಿಗೆ ಒಳಪಟ್ಟಿರುತ್ತದೆ.

**3) <u>ಒಕ್ಕೂಟದೊಡನೆ ಪತ್ರ ವ್ಯವಹಾರ:</u>**

ಒಕ್ಕೂಟದ ನೇಮಕಾತಿ ಪ್ರಕ್ರಿಯೆ ಕುರಿತಂತೆ ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ.

**4) <u>ಸಹಾಯವಾಣಿ ವಿವರಗಳು:</u>**

**ಸಹಾಯವಾಣಿ (Help Line) – 9535165947**

**ದಿನಾಂಕ: 14-11-2025 ರಿಂದ 14-12-2025 ರವರೆಗೆ**

**ಸಮಯ: ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 5.00 ಗಂಟೆವರೆಗೆ**

**5) ನೇಮಕಾತಿಗೆ ಅನರ್ಹತೆಗಳು:**

ಯಾವುದೇ ವ್ಯಕ್ತಿಯು –

- ಭಾರತ ಪ್ರಜೆಯಲ್ಲದಿದ್ದರೆ;
- 1872 ರ ಭಾರತೀಯ ಕರಾರು ಕಾಯಿದೆಯ ಪ್ರಕಾರ ಕರಾರು ಮಾಡಿಕೊಳ್ಳಲು ಅನರ್ಹನಾಗಿದ್ದರೆ;
- ನ್ಯಾಯಾಲಯದಲ್ಲಿ ಕ್ರಿಮಿನಲ್ ಅಪರಾಧಗಳಿಗಾಗಿ ಶಿಕ್ಷೆ ಹೊಂದಿದ್ದರೆ;
- ಒಕ್ಕೂಟದ ಸದಸ್ಯತ್ವ ಪಡೆದ ವ್ಯಕ್ತಿಯಾಗಿದ್ದರೆ;

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..

- ಭಾರತ ಸರ್ಕಾರದ ಅಥವಾ ರಾಜ್ಯ ಸರ್ಕಾರದ ಅಥವಾ ಶಾಸನಬದ್ಧ ನಿಗಮದ ಅಥವಾ ರಾಜ್ಯ ಅಥವಾ ಕೇಂದ್ರ ಸರ್ಕಾರದ ಸ್ವಾಮಿತ್ವದ ಸಾರ್ವಜನಿಕ ಉದ್ಯಮಗಳ ಅಥವಾ ವಾಣಿಜ್ಯ / ಸಹಕಾರ ಉದ್ಯಮಗಳ ಅಥವಾ ಸ್ಥಳೀಯ ಸಂಸ್ಥೆಗಳ ಅಥವಾ ಸಹಕಾರ ಸಂಘಗಳ ಅಥವಾ ಬೇರಾವುದೇ ಸಂಸ್ಥೆಯ ನೌಕರನಾಗಿದ್ದು, ಅವುಗಳ ಸೇವೆಯಿಂದ ವಜಾ ಮಾಡಲ್ಪಟ್ಟಿದ್ದರೆ;
- ಸಕ್ಷಮ ನ್ಯಾಯಾಲಯದಿಂದ ದಿವಾಳಿಯೆಂದು ಘೋಷಿಸಲ್ಪಟ್ಟ ವ್ಯಕ್ತಿ ಅಥವಾ ಅನನ್ಮುಕ್ತ ದಿವಾಳಿ ಆಗಿದ್ದರೆ;
- ಮಾನಸಿಕ ಅಸ್ವಸ್ಥತೆ / ಖಿನ್ನತಗೆ ಒಳಗಾಗಿದ್ದರೆ;
- ಜೀವಂತ ಪತಿ ಅಥವಾ ಪತ್ನಿಯನ್ನು ಹೊಂದಿರುವ ವ್ಯಕ್ತಿಯೊಂದಿಗೆ ವಿವಾಹ ಮಾಡಿಕೊಂಡಿದ್ದರೆ ಅಥವಾ ವಿವಾಹ ಒಪ್ಪಂದ ಮಾಡಿಕೊಂಡಿದ್ದರೆ;
- ಕಾನೂನುಬಾಹಿರ ನಿಕಾಯ (unlawful body) ಅಥವಾ ಸಂಸ್ಥೆಯೊಂದಿಗೆ ಯಾವುದೇ ರೀತಿಯ ಸಂಪರ್ಕ ಹೊಂದಿದ್ದರೆ ಅಥವಾ ಸದಸ್ಯನಾಗಿದ್ದರೆ ಅಥವಾ ಅಂತಹ ಸಂಸ್ಥೆ / ನಿಕಾಯದ ಯಾವುದೇ ಚಟುವಟಿಕೆಯಲ್ಲಿ ಅಥವಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರೆ ಅಥವಾ ಸಂಪರ್ಕ ಹೊಂದಿದ್ದರೆ;
- ಭಾರತ ಸಂವಿಧಾನ ಮೌಲ್ಯಗಳ ಸರ್ವೋಚ್ಚತೆಗೆ ಬದ್ಧನಾಗಿರದೆ ಸಂವಿಧಾನವನ್ನು ಬುಡಮೇಲು ಮಾಡುವ ಗುರಿ ಹೊಂದಿದ್ದರೆ;
- ಭಾರತದ ಸಾರ್ವಭೌಮತ್ವ ಮತ್ತು ಅಖಂಡತೆ, ದೇಶದ ಭದ್ರತೆ, ರಾಜ್ಯದ ಭದ್ರತೆ, ಸಾರ್ವಜನಿಕ ಸುವ್ಯವಸ್ಥೆಗೆ ಧಕ್ಕೆ ತರುವಂತಹ / ಭಂಗ ಮಾಡುವಂತಹ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದರೆ;
- ದೇಶದ / ರಾಜ್ಯದ ವಿವಿಧ ವರ್ಗದ ಜನತೆಯ ನಡುವೆ ಧರ್ಮ, ಜನಾಂಗ, ಜಾತಿ, ಭಾಷೆ, ಕೋಮು ಆಧಾರದ ಮೇಲೆ ಶತೃತ್ವ ಅಥವಾ ದ್ವೇಷದ ಭಾವನೆಗಳಿಗೆ ಪ್ರಚೋದಿಸುವ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದರೆ;
- ಕೇಂದ್ರ ಅಥವಾ ಯಾವುದೇ ರಾಜ್ಯದ ಲೋಕಸೇವಾ ಆಯೋಗ ಅಥವಾ ಸ್ವಾಯತ್ತ / ನೇಮಕಾತಿ ಸಮಿತಿಗಳು ನಡೆಸುವ ಆಯ್ಕೆ ಅಥವಾ ಪರೀಕ್ಷೆಯಲ್ಲಿ ಪಾಲ್ಗೊಳ್ಳಲು ಖಾಯಂ ಆಗಿ ಬಹಿಷ್ಕೃತನಾಗಿದ್ದರೆ ಅಥವಾ ಅನರ್ಹತೆ ಹೊಂದಿದ್ದರೆ;
- ನೈತಿಕ ಅಧಃಪತನವನ್ನು ಒಳಗೊಂಡ ಯಾವುದೇ ಅಪರಾಧಕ್ಕಾಗಿ ಅಪರಾಧಿಯೆಂದು ಸಿದ್ಧದೋಷಿಯಾಗಿದ್ದರೆ ಅಥವಾ ನಿರ್ಣೀತವಾಗಿದ್ದರೆ;
- ವೈದ್ಯಕೀಯವಾಗಿ ಅನರ್ಹನೆಂದು ಪರಿಗಣಿಸಲಾಗಿದ್ದರೆ / ಪರಿಗಣಿಸಲಾದರೆ.
- ಯಾವುದೇ ಅಭ್ಯರ್ಥಿಯು ತನ್ನ ನೇಮಕಾತಿಗಾಗಿ ಅಧಿಕಾರಿಗಳ / ಅಧಿಕಾರೇತರ ಹೊರಗಿನ ಬೆಂಬಲವನ್ನು ಯಾವುದೇ ರೀತಿಯಲ್ಲಿ ಪ್ರಯತ್ನಪಟ್ಟಿರುವುದು ಕಂಡುಬಂದಲ್ಲಿ, ಆತನು ಒಕ್ಕೂಟದ ನೇಮಕಾತಿಗೆ / ಸೇವೆಗೆ ಸೇರಲು ಅವಕಾಶ ಇರತಕ್ಕದ್ದಲ್ಲ ;-
- ಯಾವುದೇ ಅಭ್ಯರ್ಥಿಯು ಒಕ್ಕೂಟದ ಸೇವೆಗಳಿಗೆ ಅರ್ಜಿ ಹಾಕಿಕೊಳ್ಳಲು ಮತ್ತು ನೇಮಕಾತಿ ಪಡೆಯಲು ಹಾಗೂ ಒಕ್ಕೂಟದ ಯಾವುದೇ ಉದ್ಯೋಗಿಯು ಸೇವೆಯಲ್ಲಿ ಮುಂದುವರೆಯಲು, ಮೇಲಿನ ಅನರ್ಹತೆಗಳನ್ನು ಹೊಂದಿರತಕ್ಕದ್ದಲ್ಲ. ಈ ನಿಬಂಧನೆಗಳಲ್ಲಿ ಉಕ್ತವಾದ ಯಾವುದೇ ಅನರ್ಹತೆಗೆ ಒಳಗಾಗಿರುವುದು ಕಂಡುಬಂದಲ್ಲಿ / ಸಾಬೀತಾದಲ್ಲಿ, ಅಂಥ ವ್ಯಕ್ತಿಯನ್ನು ತಕ್ಷಣದಿಂದ ಒಕ್ಕೂಟದ ಸೇವೆಯಿಂದ ತೆಗೆದುಹಾಕತಕ್ಕದ್ದು ಮತ್ತು ಆ ಬಗ್ಗೆ ಕ್ರಿಮಿನಲ್ ಕ್ರಮ ಕೈಗೊಳ್ಳಲು ಅವಕಾಶವಿರುತ್ತದೆ.

### 6) <u>ಸೇವಾ ಸೌಲಭ್ಯಗಳನ್ನು ನೀಡುವ ಬಗ್ಗೆ</u>

- ಒಕ್ಕೂಟದ ಹುದ್ದೆಗಳಿಗೆ ಆಯ್ಕೆಯಾಗುವ ಅಭ್ಯರ್ಥಿಗಳಿಗೆ ಒಕ್ಕೂಟದ ಅನುಮೋದಿತ ಸಿಬ್ಬಂದಿ ಸೇವಾ ಅಧೀನ ನಿಯಮಗಳು–1999 (ತಿದ್ದುಪಡಿ ಒಳಗೊಂಡು) ಹಾಗೂ ವೃಂದ ಮತ್ತು ನೇಮಕಾತಿ ನಿಯಮಗಳು–2018 ಮತ್ತು ತಿದ್ದುಪಡಿ ನಿಯಮಗಳು ಅನ್ವಯಿಸುತ್ತವೆ.
- ಒಕ್ಕೂಟದ ಹುದ್ದೆಗಳಿಗೆ ಆಯ್ಕೆಯಾಗುವ ಅಭ್ಯರ್ಥಿಗಳು ನೇಮಕಾತಿ ಪ್ರಕಟಣೆಯಲ್ಲಿ ತಿಳಿಸಿದ ವೇತನ ಶ್ರೇಣಿಯಲ್ಲಿ ಸೇವಾ ಸೌಲಭ್ಯವನ್ನು ಪಡೆಯಲು ಮಾತ್ರ ಅರ್ಹರಾಗಿರುತ್ತಾರೆ.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..
ಶಿವಮೊಗ್ಗ.-577222

- ಪತ್ರಿಕಾ ಪ್ರಕಟಣೆಯಲ್ಲಿ ಹಾಗೂ ಜಾಹೀರಾತಿನಲ್ಲಿ ನಿಗದಿತ ಹುದ್ದೆ ಮತ್ತು ವೇತನ ಶ್ರೇಣಿಯಲ್ಲಿ ನೇರ ನೇಮಕಾತಿ ಮುಖಾಂತರ ನೇಮಕಗೊಳ್ಳುವ ಪದವಿ/ತಾಂತ್ರಿಕ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿ ಯಾವುದೇ ಅನಾಮಲಿ ವೇತನ ಶ್ರೇಣಿ ಮರುನಗದೀಕರಣ, ಹುದ್ದೆ ಹಾಗೂ ಯಾವುದೇ ಆರ್ಥಿಕ ಸೌಲಭ್ಯಕ್ಕೆ ಅವಕಾಶವಿರುವುದಿಲ್ಲ.
- ಆಯ್ಕೆಯಾಗುವ ಅಭ್ಯರ್ಥಿಗಳು ನಿಯೋಜಿಸಿದ ಒಕ್ಕೂಟದ ಕೇಂದ್ರ ಕಚೇರಿ ಅಥವಾ ಯಾವುದೇ ಘಟಕದಲ್ಲಿ ಯಾವುದೇ ಪಾಳಿಗಳಲ್ಲಿ ಕರ್ತವ್ಯ ನಿರ್ವಹಿಸಲು ಬದ್ಧರಾಗಿರಬೇಕು.
- ಒಕ್ಕೂಟದ ಹಿತದೃಷ್ಟಿಯಿಂದ ಒಕ್ಕೂಟದ ವ್ಯಾಪ್ತಿಯನ್ನು ಹೊರತುಪಡಿಸಿದ ಯಾವುದೇ ಸ್ಥಳಗಳಿಗೂ ಸಹ ಅಭ್ಯರ್ಥಿಗಳನ್ನು ನಿಯೋಜಿಸಬಹುದಾದ ಹಕ್ಕನ್ನು ಒಕ್ಕೂಟವು ಹೊಂದಿರುತ್ತದೆ.
- ಅಭ್ಯರ್ಥಿಗಳ ಆಯ್ಕೆಯ ನಂತರ ಅರ್ಜಿಯ ಜೊತೆ ಸಲ್ಲಿಸಿರುವ ವಿದ್ಯಾರ್ಹತೆ, ಮೀಸಲಾತಿ, ಜನ್ಮದಿನಾಂಕ ಮತ್ತು ಇತರೆ ದಾಖಲೆಗಳನ್ನು ಸಂಬಂಧಪಟ್ಟ ಸಂಸ್ಥೆ/ಪ್ರಾಧಿಕಾರ/ಶಾಲಾ/ಕಾಲೇಜು/ವಿಶ್ವವಿದ್ಯಾಲಯಗಳಿಂದ ನೈಜತೆಯ ಬಗ್ಗೆ ದೃಢೀಕರಿಸಿಕೊಳ್ಳುವ ಹಕ್ಕನ್ನು ಒಕ್ಕೂಟವು ಕಾಯ್ದಿರಿಸಿಕೊಂಡಿದೆ. ಸದರಿ ದಾಖಲೆಗಳ ಪರಿಶೀಲನೆಯಲ್ಲಿ ಯಾವುದಾದರು ನ್ಯೂನ್ಯತೆ/ಸುಳ್ಳು/ನಕಲು/ದೋಷಪೂರಿತ ಅಂಶ ಎಂದು ಕಂಡುಬಂದಲ್ಲಿ ಯಾವುದೇ ಮುನ್ಸೂಚನೆ ನೀಡದೇ ಅಂತಹವರ ನೇಮಕಾತಿಯನ್ನು ರದ್ದುಪಡಿಸುವ/ಸೇವೆಯಿಂದ ವಜಾಗೊಳಿಸುವ ಹಾಗೂ ಕಾನೂನು ರೀತ್ಯಾ ಕ್ರಮ ಜರುಗಿಸಲಾಗುವುದು.

**7) ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸುತ್ತಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಸಂದರ್ಶನದಿಂದ/ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು. ಇಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ನೇಮಕಾತಿ ಪ್ರಕ್ರಿಯೆಯ ಸಂದರ್ಭದಲ್ಲಿ ಅಥವಾ ನೇಮಕಾತಿಯ ನಂತರವೂ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

## II – ವಯೋಮಿತಿ:

ನೇಮಕಾತಿ ಅರ್ಜಿಗಳನ್ನು ಸಲ್ಲಿಸಲು ಕೊನೆಯ **ದಿನಾಂಕ: 14-12-2025 ಕ್ಕೆ** ನಿಗದಿಪಡಿಸಲಾಗಿದ್ದು, ಈ ದಿನಾಂಕಕ್ಕೆ ಅಭ್ಯರ್ಥಿಗಳ ಕನಿಷ್ಟ / ಗರಿಷ್ಟ ವಯೋಮಿತಿ ಈ ಕೆಳಕಂಡಂತೆ ಇರತಕ್ಕದ್ದು.

| ಕ್ರ. ಸಂ. | ಮೀಸಲಾತಿ ವರ್ಗೀಕರಣ | ಕನಿಷ್ಟ ವಯೋಮಿತಿ | ಗರಿಷ್ಟ ವಯೋಮಿತಿ | ಸಡಿಲಿಕೆ ನಂತರ ಗರಿಷ್ಟ ವಯೋಮಿತಿ |
|---|---|---|---|---|
| 1 | ಪರಿಶಿಷ್ಟ ಜಾತಿ ಪ್ರವರ್ಗ-ಎ, ಪರಿಶಿಷ್ಟ ಜಾತಿ ಪ್ರವರ್ಗ-ಬಿ, ಪರಿಶಿಷ್ಟ ಜಾತಿ ಪ್ರವರ್ಗ-ಸಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ 1 | 18 | 40 | 43 |
| 2 | ಪ್ರವರ್ಗ 2ಎ, 2ಬಿ, 3ಎ ಮತ್ತು 3ಬಿ | 18 | 38 | 41 |
| 3 | ಸಾಮಾನ್ಯ ವರ್ಗ | 18 | 35 | 38 |

**ವಿ.ಸೂ.** ಈ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸಿರುವ ನೇಮಕಾತಿ ಪ್ರಕಟಣೆ ಅನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಮೇಲಿನ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ 262 ಸೇನೆನಿ 2025 ದಿನಾಂಕ: 29.09.2025 ರನ್ವಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಟ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ 03 ವರ್ಷಗಳ ಸಡಿಲಿಕೆ (as one time measure) ಇರುತ್ತದೆ.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..

ಶಿಮುಲ್

**ವಯೋಮಿತಿ ಸಡಿಲಿಕೆ**

ಮೇಲ್ಕಂಡ ವಯೋಮಿತಿಗೆ ಹೆಚ್ಚುವರಿಯಾಗಿ ಈ ಕೆಳಕಂಡಂತೆ ವಯೋಮಿತಿ ಸಡಲಿಕೆ ಇರುತ್ತದೆ.

| ಕ್ರ.ಸಂ | ವಿವರ | ಸಡಲಿಕೆ ಅವಧಿ |
|---|---|---|
| 1 | ಮಾಜಿ ಸೈನಿಕರಿಗೆ | ಮಿಲಿಟರಿ ಸೇವೆಯಲ್ಲಿ ಸೇವೆ ಸಲ್ಲಿಸಿದ ಅವಧಿಗೆ |
| 2 | ಎನ್.ಸಿ.ಸಿ ಕೆಡೆಟ್ ಇನ್ಸ್ಟ್ರಕ್ಟರ್‌ಗಳಿಗೆ | ಕೆಡೆಟ್ ಇನ್ಸ್ಟ್ರಕ್ಟರ್ ಆಗಿ ಎನ್.ಸಿ.ಸಿಯಲ್ಲಿ ಸೇವೆ ಸಲ್ಲಿಸಿದ ಅವಧಿಗೆ |
| 3 | ವಿಧವೆಯರಿಗೆ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆ ಎಂದು ಹಾಗೂ ಮರುಮದುವೆಯಾಗಿರುವುದಿಲ್ಲವೆಂಬ ಪ್ರಮಾಣಪತ್ರ ಸಲ್ಲಿಸಿದಲ್ಲಿ) | 10 ವರ್ಷಗಳ ಅವಧಿಗೆ |
| 4 | ಅಂಗವಿಕಲರಿಗೆ | 10 ವರ್ಷಗಳ ಅವಧಿಗೆ |

## III – ಮೀಸಲಾತಿಗಳು:

ಜಾತಿ / ವರ್ಗ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಇದಕ್ಕೆ ಸಂಬಂಧಿಸಿದಂತೆ ಸರ್ಕಾರವು ನಿಗದಿಪಡಿಸಿರುವ ನಮೂನೆಗಳಲ್ಲಿ ಚಾಲ್ತಿಯಲ್ಲಿರುವ ಪ್ರಮಾಣ ಪತ್ರವನ್ನು ಲಗತ್ತಿಸತಕ್ಕದ್ದು. (ವಿದ್ಯಾಭ್ಯಾಸ / ಶಿಕ್ಷಣಕ್ಕಾಗಿ / ಇತರೆ ಸರ್ಕಾರಿ ಸೌಲಭ್ಯಕ್ಕಾಗಿ ಅಥವಾ ಸಾಲಕ್ಕಾಗಿ ಪಡೆದಿರುವ ಜಾತಿ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ).

ಮೀಸಲಿರಿಸಿದ ವರ್ಗಗಳಲ್ಲಿ ಮಹಿಳಾ, ಮಾಜಿ ಸೈನಿಕ, ಕನ್ನಡ ಮಾಧ್ಯಮ, ಗ್ರಾಮೀಣ ಯೋಜನಾ ನಿರಾಶ್ರಿತ ಹಾಗೂ ತೃತೀಯ ಲಿಂಗದ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ಹುದ್ದೆಗಳನ್ನು ಅದೇ ವರ್ಗಕ್ಕೆ ಸೇರಿದ ಇತರೆ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ಎ) ಗ್ರಾಮೀಣ ಅಭ್ಯರ್ಥಿ :**

ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10 ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು.

ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ–1 ನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ–2 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ **ದಿನಾಂಕ: 14–12–2025** ರ ಒಳಗಾಗಿ ಪಡೆದಿರಬೇಕು.

ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ ಪ್ರವರ್ಗ–ಎ, ಪರಿಶಿಷ್ಟ ಜಾತಿ ಪ್ರವರ್ಗ–ಬಿ, ಪರಿಶಿಷ್ಟ ಜಾತಿ ಪ್ರವರ್ಗ–ಸಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ–2 ರಲ್ಲಿ **ದಿನಾಂಕ: 14–12–2025** ರ ಒಳಗಾಗಿ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು ಹಾಗೂ ಜಾರಿ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು.

ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ **ದಿನಾಂಕ: 14–12–2025** ರ ಒಳಗಾಗಿ ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಗೆ ಪರಿಗಣಿಸಲಾಗುವುದಿಲ್ಲ. ಒಂದು ವೇಳೆ ಅಭ್ಯರ್ಥಿಗಳ ನೇರ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ, ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ.

ಈ ಪ್ರಮಾಣ ಪತ್ರಗಳ ನಮೂನೆಗಳನ್ನು ನೇಮಕಾತಿ ಪ್ರಕಟಣೆಯ ಕೊನೆಯಲ್ಲಿ ನೀಡಲಾಗಿದೆ.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ

**ಬಿ) ಅಂಗವಿಕಲ ಅಭ್ಯರ್ಥಿ :**

ಅಂಗವಿಕಲ ಮೀಸಲಾತಿ ಅಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಸಕ್ಷಮ ವೈದ್ಯಕೀಯ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರತಕ್ಕದ್ದು. ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಅಂಗವಿಕಲ ಮೀಸಲಾತಿಗೆ ಪರಿಗಣಿಸಲಾಗುವುದಿಲ್ಲ. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು/ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ. ಈ ಪ್ರಮಾಣ ಪತ್ರದ ನಮೂನೆಯನ್ನು ನೇಮಕಾತಿ ಪ್ರಕಟಣೆಯ ಕೊನೆಯಲ್ಲಿ ನೀಡಲಾಗಿದೆ.

**ಸಿ) ಕನ್ನಡ ಮಾಧ್ಯಮ ಅಭ್ಯರ್ಥಿ :**

ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ **1 ನೇ ತರಗತಿಯಿಂದ 10 ನೇ ತರಗತಿಯವರೆಗೆ** ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಜಾರಿ ದಿನಾಂಕ ಹಾಗೂ ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಕನ್ನಡ ಮಾಧ್ಯಮ ಅಭ್ಯರ್ಥಿ ಮೀಸಲಾತಿಗೆ ಪರಿಗಣಿಸಲಾಗುವುದಿಲ್ಲ. ಈ ಪ್ರಮಾಣ ಪತ್ರದ ನಮೂನೆಯನ್ನು ನೇಮಕಾತಿ ಪ್ರಕಟಣೆಯ ಕೊನೆಯಲ್ಲಿ ನೀಡಲಾಗಿದೆ.

**ಡಿ) ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ (PDP):**

ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಯೋಜನೆಗಳಿಂದ ನಿರ್ವಸಿತರಾದ (ಆದರೆ ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬ ಅಭ್ಯರ್ಥಿಗಳಿಗೆ ಈ ಮೀಸಲಾತಿ ಅನ್ವಯವಾಗುವುದಿಲ್ಲ). ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಸಂದರ್ಶನಕ್ಕೆ ಹಾಜರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಗೆ ಪರಿಗಣಿಸಲಾಗುವುದಿಲ್ಲ. ಈ ಪ್ರಮಾಣ ಪತ್ರದ ನಮೂನೆಯನ್ನು ನೇಮಕಾತಿ ಪ್ರಕಟಣೆಯ ಕೊನೆಯಲ್ಲಿ ನೀಡಲಾಗಿದೆ.

**ಇ) ಮಾಜಿ ಸೈನಿಕ ಅಭ್ಯರ್ಥಿ:**

ಮಾಜಿ ಸೈನಿಕ ಅಂದರೆ ಕೇಂದ್ರ ಸಶಸ್ತ್ರ ದಳಗಳಾದ ಭೂದಳ, ನೌಕಾದಳ ಮತ್ತು ವಾಯುದಳಗಳಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ.

ಅಂದರೆ:

ಎ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ ವ್ಯಕ್ತಿ.

ಬಿ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಗೆ ಅನರ್ಹನಾದವ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಸೇವೆಯಿಂದ ಬಿಡುಗಡೆಯಾದ ವ್ಯಕ್ತಿ.

ಸಿ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..
ಶಿವಮೊಗ್ಗ.-577222

ಡಿ) ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದು ಹಾಕಿದ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆದಿರುವ ವ್ಯಕ್ತಿ.

ಇ) ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿ.

1. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.
2. ಮಿಲಿಟರಿ ಸೇವೆಯಿಂದ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
3. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

**ವಿವರಣೆ:**

ಎ) ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದ್ದರೂ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ಒಕ್ಕೂಟದ ಹುದ್ದೆಗೆ ನೇಮಕ ಹೊಂದುವಂತಿಲ್ಲ.

ಬಿ) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಪತ್ನಿ ಅಥವಾ ಪತಿ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿ ಪಡೆಯಲು ಅರ್ಹರಿರುತ್ತಾರೆ. ಆದರೆ ಅಂತಹವರುಗಳು ವಯೋಮಿತಿ ಸಡಿಲಿಕೆಯನ್ನು ಪಡೆಯಲು ಅರ್ಹರಿರುವುದಿಲ್ಲ.

**ಎಫ್) ತೃತೀಯ ಲಿಂಗದ ಅಭ್ಯರ್ಥಿ:**

ತೃತೀಯ ಲಿಂಗ ಮೀಸಲಾತಿ ಅಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ಸರ್ಕಾರದ ನಿಯಮಗಳ ರೀತ್ಯಾ ಸಕ್ಷಮ ವೈದ್ಯಕೀಯ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರತಕ್ಕದ್ದು. ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ತೃತೀಯ ಲಿಂಗದ ಮೀಸಲಾತಿಗೆ ಪರಿಗಣಿಸಲಾಗುವುದಿಲ್ಲ.

## IV) ಶೈಕ್ಷಣಿಕ ವಿದ್ಯಾರ್ಹತೆ :

ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಂಬಂಧಿಸಿದ ಹುದ್ದೆಗಳಿಗೆ ಸೂಚಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು. ಯಾವುದೇ ಹುದ್ದೆಗೆ ಸೇವಾನುಭವವನ್ನು ನಿಗದಿಪಡಿಸಿದಾಗ ಅಭ್ಯರ್ಥಿಗಳು ವಿದ್ಯಾರ್ಹತೆ ಹೊಂದಿದ ನಂತರ ಆ ಸೇವಾನುಭವ ಹೊಂದಿರತಕ್ಕದ್ದು. ಅಭ್ಯರ್ಥಿಗಳು ಅರ್ಜಿಯಲ್ಲಿ ಎಲ್ಲಾ ಸೆಮಿಸ್ಟರ್ / ವರ್ಷಗಳಲ್ಲಿ ನಿಗದಿಪಡಿಸಿರುವ ಗರಿಷ್ಟ ಮತ್ತು ಪಡೆದಿರುವ ಅಂಕಗಳನ್ನು ಕ್ರೂಢೀಕರಿಸಿ ಸರಾಸರಿ ಅಂಕಗಳನ್ನು ಸ್ಪಷ್ಟವಾಗಿ ನಮೂದಿಸುವುದು.

ಗ್ರೇಡ್ ಅಂಕಗಳನ್ನು ಪಡೆದ ಅಭ್ಯರ್ಥಿಗಳು ಅವರ ಗ್ರೇಡ್ ಅಂಕಗಳನ್ನು ಶೇಕಡವಾರು ಅಂಕಗಳಿಗೆ ಪರಿವರ್ತಿಸಿ ವಿಶ್ವವಿದ್ಯಾಲಯ ನೀಡಿರುವ ಪ್ರಮಾಣ ಪತ್ರದಲ್ಲಿ ನಮೂದಿಸಿರುವ ಶೇಕಡಾವಾರು ಅಂಕಗಳನ್ನು ತಪ್ಪದೇ ನಮೂದಿಸಬೇಕು.

"ಪದವಿ" ಎಂದರೆ ಕೇಂದ್ರ / ರಾಜ್ಯ ಸರ್ಕಾರ ಕಾಲಕಾಲಕ್ಕೆ ಹೊರಡಿಸುವ ಅಧಿಸೂಚನೆಗಳ ರೀತ್ಯಾ ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದ ಅಂಗೀಕೃತ ಪದವಿ.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ

"ಸ್ನಾತಕೋತ್ತರ ಪದವಿ" ಎಂದರೆ ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದ ಅಂಗೀಕೃತ ಸ್ನಾತಕೋತ್ತರ ಪದವಿ ಮತ್ತು ಕೇಂದ್ರ / ರಾಜ್ಯ ಸರ್ಕಾರ ಕಾಲಕಾಲಕ್ಕೆ ಈ ಕುರಿತು ಹೊರಡಿಸುವ ಅಧಿಸೂಚನೆಗಳ ರೀತ್ಯಾ.

ಐ.ಟಿ.ಐ/ಬಾಯ್ಲರ್ ಅಟೆಂಡೆಂಟ್ ವಿದ್ಯಾರ್ಹತೆ ಎಂದರೆ ಎಸ್.ಎಸ್.ಎಲ್.ಸಿ /ತತ್ಸಮಾನ ವಿದ್ಯಾರ್ಹತೆ ನಂತರ ಕರ್ನಾಟಕ ಉದ್ಯೋಗ ಮತ್ತು ತರಬೇತಿ ಇಲಾಖೆ/ರಾಜ್ಯ ಪರೀಕ್ಷಾ ಮಂಡಳಿಯಿಂದ/ಕರ್ನಾಟಕ ಸರ್ಕಾರ ಬಾಯ್ಲರ್ ಅಟೆಂಡೆಂಟ್ ಪರೀಕ್ಷಾ ಮಂಡಳಿಯಿಂದ ಪಡೆದ ಐ.ಟಿ.ಐ ವಿದ್ಯಾರ್ಹತೆ.

## V –ಆಯ್ಕೆ ವಿಧಾನ:

ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 ರನಿಯಮ 18(ಸಿ) ರಂತೆ ಪದವಿ ವಿದ್ಯಾರ್ಹತೆ ಹೊಂದಿರಬೇಕಾದ ಹುದ್ದೆಗಳಿಗೆ ಮತ್ತು ಪದವಿಗಿಂತ ಕಡಿಮೆ ವಿದ್ಯಾರ್ಹತೆ ಹೊಂದಿರಬೇಕಾದ ಹುದ್ದೆಗಳಿಗೆ (ಕಿರಿಯ ತಾಂತ್ರಿಕ ಹುದ್ದೆ) ಪ್ರತ್ಯೇಕವಾಗಿ ಲಿಖಿತ ಪರೀಕ್ಷೆಯನ್ನು ಒಟ್ಟು 200 ಅಂಕಗಳಿಗೆ ಏರ್ಪಡಿಸಲಾಗುವುದು. ಕನ್ನಡ ಭಾಷೆಗೆ 50 ಅಂಕಗಳು, ಸಾಮಾನ್ಯ ಇಂಗ್ಲಿಷ್‌ಗಾಗಿ 25 ಅಂಕಗಳು, ಸಾಮಾನ್ಯ ಜ್ಞಾನಕ್ಕಾಗಿ 25 ಅಂಕಗಳು, ಸಹಕಾರ ವಿಷಯಗಳಿಗಾಗಿ 50 ಅಂಕಗಳು, ಭಾರತದ ಸಂವಿಧಾನ ವಿಷಯಕ್ಕಾಗಿ 25 ಅಂಕಗಳು ಹಾಗೂ ಒಕ್ಕೂಟದ ಕಾರ್ಯಚಟುವಟಿಕೆಗಳು ಮತ್ತು ವಸ್ತುನಿಷ್ಠ ವಿಷಯಗಳಿಗೆ 25 ಅಂಕಗಳು ಒಳಗೊಂಡಿರುತ್ತವೆ.

ಕರ್ನಾಟಕ ರಾಜ್ಯ, ಸಹಕಾರ ಸಂಘಗಳ ನಿಬಂಧಕರ ಸುತ್ತೋಲೆ ಸಂಖ್ಯೆ:ಆರ್.ಸಿ.ಎಸ್/ಆರ್‌ಎಸ್‌ಆರ್/ಎಕ್ಸ್‌ಎಂಸಿ/41/2020–21 ದಿನಾಂಕ: 16.09.2020 ರಲ್ಲಿನ ಅವಕಾಶಗಳಂತೆ ಬಾಹ್ಯ ಮೂಲ ಸಂಸ್ಥೆಗಳಿಂದ ಲಿಖಿತ ಪರೀಕ್ಷೆ ಮತ್ತು ಮೌಲ್ಯಮಾಪನ ನಡೆಸಲಾಗುವುದು.

ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ (written examination) ಗಳಿಸಿದ ಅಂಕಗಳ ಮೆರಿಟ್ ಆಧಾರದ ಮೇಲೆ ಮೀಸಲಾತಿಗನುಗುಣವಾಗಿ ಅಭ್ಯರ್ಥಿಗಳನ್ನು 1:5 ರ ಅನುಪಾತದಲ್ಲಿ ಮೌಖಿಕ ಸಂದರ್ಶನಕ್ಕೆ ಕರೆಯಲಾಗುವುದು. ಮೌಖಿಕ ಸಂದರ್ಶನಕ್ಕೆ ಗರಿಷ್ಟ 15 ಅಂಕಗಳನ್ನು ನಿಗದಿಪಡಿಸಲಾಗಿದೆ. ಅಭ್ಯರ್ಥಿಯು ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇ. 85 ಕ್ಕೆ ಇಳಿಸಿ ಹಾಗೆ ಪ್ರಾಪ್ತವಾಗುವ ಅಂಕಗಳಿಗೆ ಮೌಖಿಕ ಸಂದರ್ಶನದಲ್ಲಿ(Interview) ಗಳಿಸುವ ಅಂಕಗಳನ್ನು ಒಟ್ಟುಗೂಡಿಸಿ ಅಂತಿಮ ಮೆರಿಟ್ ಪಟ್ಟಿಯನ್ನು ತಯಾರಿಸಿ ಮೆರಿಟ್ ಹಾಗೂ ಮೀಸಲಾತಿ ಆಧಾರದಲ್ಲಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ.

ಲಿಖಿತ ಪರೀಕ್ಷೆಯ ಪ್ರವೇಶ ಪತ್ರ, ದಿನಾಂಕ ಹಾಗೂ ಪರೀಕ್ಷೆಯ ಕಾಲಾವಧಿಯನ್ನು ಅರ್ಹ ಅಭ್ಯರ್ಥಿಗಳಿಗೆ ನೊಂದಾಯಿತ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್ ಮೂಲಕ, ಇ–ಮೇಲ್ ಮೂಲಕ ಹಾಗೂ ಒಕ್ಕೂಟದ ವೆಬ್‌ಸೈಟ್‌ನಲ್ಲಿ ತಿಳಿಸಲಾಗುವುದು.

ಸದರಿ ಮಾಹಿತಿಯನ್ನು ಒಕ್ಕೂಟದ ವೆಬ್‌ಸೈಟ್ ಮೂಲಕ ತಿಳಿದುಕೊಂಡು ಲಿಖಿತ ಪರೀಕ್ಷೆಯ ಪ್ರವೇಶ ಪತ್ರ / ಅರ್ಹರಾದಲ್ಲಿ ಸಂದರ್ಶನ ಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಹಾಜರಾಗುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.

**ಅಭ್ಯರ್ಥಿಯು ಸಂದರ್ಶನದ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಮೂಲ ಪ್ರಮಾಣ ಪತ್ರಗಳು ಈ ಕೆಳಕಂಡಂತಿರುತ್ತವೆ:**

1. ವಿವಿಧ ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ / ಎಲ್ಲಾ ಸೆಮಿಸ್ಟರ್‌ಗಳ / ವರ್ಷಗಳ ಪ್ರಮಾಣ ಪತ್ರಗಳು ಅಥವಾ ಅಂಕಪಟ್ಟಿಗಳು.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..

2. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತಭಾಗ **(Extract of Cumulative Record)** / ಜನನ ಪ್ರಮಾಣ ಪತ್ರ
3. ವಿವಿಧ ಮೀಸಲಾತಿಗಳನ್ನು ಕೋರಿದ್ದಲ್ಲಿ, ಮೀಸಲಾತಿ ಪ್ರಮಾಣ ಪತ್ರಗಳು.
4. ಅನುಭವ / ನಿರಾಕ್ಷೇಪಣಾ ಪ್ರಮಾಣ ಪತ್ರ
5. ಕಂಪ್ಯೂಟರ್ ನಿರ್ವಹಣೆಯಲ್ಲಿ ಸಂಬಂಧಪಟ್ಟ ಹುದ್ದೆಗಳಿಗೆ ನಿಗದಿಪಡಿಸಿರುವಂತೆ ಜ್ಞಾನ ಹೊಂದಿರುವ ಪ್ರಮಾಣ ಪತ್ರಗಳು

ಒಬ್ಬ ಅಭ್ಯರ್ಥಿಯು ಕನಿಷ್ಠ ಪದವಿ ವಿದ್ಯಾರ್ಹತೆ ಹೊಂದಿ ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಿದಲ್ಲಿ, ಅಂತಹ ಅಭ್ಯರ್ಥಿಯು ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಅವನು ಅರ್ಜಿ ಸಲ್ಲಿಸಿರುವ ಎಲ್ಲಾ ಹುದ್ದೆಗಳಿಗೂ ಪರಿಗಣಿಸಲಾಗುವುದು.

ಅದೇ ರೀತಿ ಪದವಿಗಿಂತ ಕಡಿಮೆ ವಿದ್ಯಾರ್ಹತೆ ಕೋರಿರುವ ಹುದ್ದೆಗಳಿಗೆ ಒಂದಕ್ಕಿಂತ ಹೆಚ್ಚಿನ ಹುದ್ದೆಗೆ ಅಭ್ಯರ್ಥಿಯು ಅರ್ಜಿ ಸಲ್ಲಿಸಿದಲ್ಲಿ ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕವನ್ನು ಎಲ್ಲಾ ಹುದ್ದೆಗಳಿಗೆ ಪರಿಗಣಿಸಲಾಗುವುದು.

ಒಕ್ಕೂಟವು ನಿಗದಿಪಡಿಸಿದ ಸ್ಥಳದಲ್ಲಿ ಲಿಖಿತ ಪರೀಕ್ಷೆ ಹಾಗೂ ಸಂದರ್ಶನಕ್ಕೆ ಅಭ್ಯರ್ಥಿಗಳು ಅವರ ಸ್ವಂತ ಖರ್ಚಿನಲ್ಲಿ ಹಾಜರಾಗುವುದು. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಒಕ್ಕೂಟದ ನೇಮಕಾತಿ ಪ್ರಾಧಿಕಾರದ ನಿರ್ಣಯವೇ ಅಂತಿಮವಾಗಿರುತ್ತದೆ.

## VI-ONLINE **ಮೂಲಕ ಅರ್ಜಿ ಭರ್ತಿ**

**ಅಭ್ಯರ್ಥಿಗಳು ONLINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು:**

**ಹಂತ1:** ಅಭ್ಯರ್ಥಿಗಳು ಒಕ್ಕೂಟದ ಅಧಿಕೃತ ವೆಬ್‌ಸೈಟ್ **www.shimul.coop** ಅನ್ನು ತೆರೆದ ಕೂಡಲೆ ಕಂಪ್ಯೂಟರ್ ಪರದೆಯ ಮೇಲೆ **'SHIMUL RECRUITMENT 2025'** ಎಂದು ಮೂಡುತ್ತದೆ. ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡುವ ಪೂರ್ವದಲ್ಲಿ ಅಧಿಸೂಚನೆ ಮತ್ತು ಸೂಚನೆಗಳನ್ನು ಕಡ್ಡಾಯವಾಗಿ ಓದಿಕೊಳ್ಳತಕ್ಕದ್ದು ಮತ್ತು ಅಂತಿಮವಾಗಿ ನಿಯಮ ಮತ್ತು ಷರತ್ತುಗಳನ್ನು ಕೆಳಗಿನ ಚೆಕ್‌ಬಾಕ್ಸ್ ಅನ್ನು ಒತ್ತುವ ಮೂಲಕ ಒಪ್ಪಿಕೊಳ್ಳತಕ್ಕದ್ದು ಮತ್ತು **Open Application** ಗುಂಡಿಯನ್ನು ಒತ್ತಿ ಮುಂದುವರಿಯುವುದು.

**ಹಂತ 2:** ಸಂಬಂಧಪಟ್ಟ ಹುದ್ದೆಯನ್ನು ಆಯ್ಕೆ ಮಾಡಿ **Apply** ಗುಂಡಿಯನ್ನು ಒತ್ತಿ ಅರ್ಜಿಯನ್ನು ಭರ್ತಿಮಾಡತಕ್ಕದ್ದು. ಅರ್ಜಿಯನ್ನು ಭರ್ತಿಮಾಡಿದ ನಂತರ ನಮೂದಿಸಿದ ವಿವರಗಳನ್ನು ಮತ್ತೊಮ್ಮೆ ಕೂಲಂಕಷವಾಗಿ ಪರಿಶೀಲಿಸಿಕೊಂಡು, ಎಲ್ಲಾ ವಿವರಗಳು ಸರಿಯಾಗಿರುತ್ತವೆಯೆಂದು ಖಚಿತಪಡಿಸಿಕೊಂಡ ನಂತರ **Preview** ಗುಂಡಿಯನ್ನು ಒತ್ತಿ ಮುಂದುವರಿಯುವುದು.

**ಹಂತ 3:** ನಿಮ್ಮ ಅರ್ಜಿಯ ಯಾವುದೇ ವಿವರಗಳ ಬದಲಾವಣೆ ಅಗತ್ಯವಿದ್ದರೆ ಪೂರ್ವದರ್ಶನ ಪುಟದಲ್ಲಿ **Edit** ಗುಂಡಿಯನ್ನು ಒತ್ತಿ ನಿಮ್ಮ ಅರ್ಜಿಯಲ್ಲಿನ ವಿವರಗಳು ಸರಿ ಇರುವುದನ್ನು ಖಚಿತಪಡಿಸಿಕೊಂಡು, ನಿಮ್ಮ ಸಹಿಯೊಂದಿಗಿನ ಪಾಸ್‌ಪೋರ್ಟ್ ಗಾತ್ರದ ಸ್ಕ್ಯಾನ್ ಮಾಡಿದ ಭಾವಚಿತ್ರವನ್ನು **(White background photo)** ಅಪ್‌ಲೋಡ್ ಮಾಡುವ ಬಗ್ಗೆ **Next** ಗುಂಡಿಯನ್ನು ಒತ್ತಿ ಮುಂದುವರಿಯುವುದು.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..
ಶಿವಮೊಗ್ಗ.-577222

**Note:** ಈ ಹಂತದಲ್ಲಿ ಅಭ್ಯರ್ಥಿಯು ನೊಂದಾಯಿಸಿದ ಇಮೇಲ್ ವಿಳಾಸಕ್ಕೆ ಒಂದು ಸ್ವಯಂಚಾಲಿತ ಇಮೇಲ್ ಮೂಲಕ ಅವರ **Registration Id** ಮತ್ತು **Password** ಅನ್ನು ಕಳುಹಿಸಲಾಗುವುದು. ಅಭ್ಯರ್ಥಿಯು **Edit Application** ಗುಂಡಿಯನ್ನು ಒತ್ತಿ ಅವರ **Registration Id** ಮತ್ತು **Password** ಅನ್ನು ಬಳಸಿ ತಮ್ಮ ವಿವರಗಳನ್ನು ಅಪ್‌ಲೋಡ್ ಮಾಡಬಹುದು ಅಥವಾ ಅಪ್‌ಲೋಡ್ ಮಾಡಿದ ಮಾಹಿತಿಯನ್ನು ಬದಲಾಯಿಸಬಹುದು. ಅಭ್ಯರ್ಥಿಗಳು **Registration Id** ಮತ್ತು **Password** ಗಳನ್ನು ತಮ್ಮಲ್ಲಿ ಮುಂದಿನ ವ್ಯವಹರಣೆಗಾಗಿ ಅಭ್ಯರ್ಥಿಯು ಕಡ್ಡಾಯವಾಗಿ ಸ್ವತಃ ನಿರ್ವಹಿಸತಕ್ಕದ್ದು.


**ಹಂತ 4:** ಅಭ್ಯರ್ಥಿಯು ಸ್ವಸಹಿಯೊಂದಿಗಿನ ಸ್ಕ್ಯಾನ್ ಮಾಡಿದ ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರವನ್ನು ಆಯ್ಕೆ ಮಾಡುವ ಬಗ್ಗೆ **Browse** ಗುಂಡಿಯನ್ನು ಒತ್ತಿ ಮತ್ತು ಅಭ್ಯರ್ಥಿಯ ಸಹಿಯೊಂದಿಗಿನ ಭಾವಚಿತ್ರವನ್ನು ಪೂರ್ವದರ್ಶನ ಮಾಡಲು **Submit** ಗುಂಡಿಯನ್ನು ಒತ್ತುವುದು.

ಒಂದು ವೇಳೆ ತಪ್ಪಾದ ಭಾವಚಿತ್ರವನ್ನು ಅಪ್‌ಲೋಡ್ ಮಾಡಿದ್ದಲ್ಲಿ ಮೇಲಿನ ಕ್ರಮವನ್ನು ಪುನರಾವರ್ತಿಸಿ.

ಅಭ್ಯರ್ಥಿಯು ಈ ಹಂತದಲ್ಲಿ **Next** ಗುಂಡಿಯನ್ನು ಒತ್ತಿದರೆ ತಮ್ಮ ಅರ್ಜಿಯಲ್ಲಿನ ಯಾವುದೇ ವಿವರವನ್ನು ಬದಲಾಯಿಸಲು ಸಾಧ್ಯವಿರುವುದಿಲ್ಲ.

ಆದ್ದರಿಂದ ಅಭ್ಯರ್ಥಿಯು ತಾನು ಅಪ್‌ಲೋಡ್ ಮಾಡಿದ ಎಲ್ಲಾ ಮಾಹಿತಿಗಳನ್ನು ಖಚಿತಪಡಿಸಿಕೊಂಡ ನಂತರವೇ **Next** ಗುಂಡಿಯನ್ನು ಒತ್ತುವುದು.

ಅಭ್ಯರ್ಥಿಯು **Photo Upload** ಗುಂಡಿಯನ್ನು ಒತ್ತಿ, ಭಾವಚಿತ್ರವನ್ನು ಅಪ್‌ಲೋಡ್ ಮಾಡಬಹುದು. **Signature Upload** ಗುಂಡಿಯನ್ನು ಒತ್ತಿ, ಸಹಿಯನ್ನು ಅಪ್‌ಲೋಡ್ ಮಾಡಬಹುದು. ಭಾವಚಿತ್ರವು ಇತ್ತೀಚೀನದಾಗಿದ್ದು, ಹಿನ್ನೆಲೆಯು **(White background photo)** ಬಿಳಿಯ ವರ್ಣದಾಗಿರತಕ್ಕದ್ದು.

| | |
|---|---|
| **ಭಾವಚಿತ್ರ ಕಡತ ಗಾತ್ರ <100ಕೆ.ಬಿ**<br><br>**ಸಹಿ ಕಡತ ಗಾತ್ರ <50ಕೆ.ಬಿ** | **ಪಾಸ್ ಪೋರ್ಟ್ ಭಾವಚಿತ್ರ ಮತ್ತು ಸಹಿ ಅಳತೆ**<br><br> |

ಒಂದು ವೇಳೆ ಅಭ್ಯರ್ಥಿಯು ತಮ್ಮ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡದಿದ್ದರೆ ಅವರ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

**ಹಂತ 5:** ಅಭ್ಯರ್ಥಿಯು ಸಂಬಂಧಪಟ್ಟ ವಿದ್ಯಾರ್ಹತೆ, ಜಾತಿ ಪ್ರಮಾಣ ಪತ್ರ, ಅಂಗವಿಕಲ ದೃಢೀಕರಣ ಪತ್ರ, ಕನ್ನಡ ಮಾಧ್ಯಮ, ಮಾಜಿ ಸೈನಿಕ, ಯೋಜನಾ ನಿರಾಶ್ರಿತ, ಗ್ರಾಮೀಣ ಪ್ರಮಾಣ ಪತ್ರ, ತೃತೀಯ ಲಿಂಗದ ಮೀಸಲಾತಿ ಪ್ರಮಾಣ ಪತ್ರಗಳ ಜೆರಾಕ್ಸ್ ಪ್ರತಿಗಳ ಎಲ್ಲಾ ಪ್ರಮಾಣ ಪತ್ರಗಳನ್ನು ಸ್ಕ್ಯಾನ್ ಮಾಡಿ **Upload** ಮಾಡತಕ್ಕದ್ದು.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..
ಶಿವಮೊಗ್ಗ.-577222

<u>ಹಂತ 6:</u> ನಂತರ ಅರ್ಜಿ ಶುಲ್ಕವನ್ನು ಪಾವತಿಸುವುದಕ್ಕೆ **Pay Online** ಗುಂಡಿಯನ್ನು ಒತ್ತಿ ಇ-ಪಾವತಿ ಗೇಟ್‌ವೇ ಮೂಲಕ **ನಿಗದಿತ ಅರ್ಜಿ ಶುಲ್ಕ ಮತ್ತು ಬ್ಯಾಂಕ್ ಶುಲ್ಕ** ಪಾವತಿ ಮಾಡುವುದು.

**<u>Note:</u>** ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ **ದಿನಾಂಕ: 14-12-2025** ರ ನಂತರ ಶುಲ್ಕವನ್ನು ಸಂದಾಯ ಮಾಡಲು ಅವಕಾಶವಿರುವುದಿಲ್ಲ. ಡಿ.ಡಿ., ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಸಂದಾಯ ಮಾಡದ ಅರ್ಜಿಗಳನ್ನು ಪರಿಗಣಿಸುವುದಿಲ್ಲ.

<u>ಹಂತ 7:</u> ಅರ್ಜಿಯ ಮುದ್ರಣವನ್ನು ಪಡೆಯಲು **Print Application** ಗುಂಡಿಯನ್ನು ಒತ್ತಿ, ಅನಂತರವೇ **Application Preview** ಮೂಡಲಿದ್ದು, ಅಭ್ಯರ್ಥಿಗಳು ಅರ್ಜಿಯ ಪ್ರತಿಯನ್ನು ಕಡ್ಡಾಯವಾಗಿ **Download** ಮಾಡಿಕೊಳ್ಳತಕ್ಕದ್ದು. ಒಕ್ಕೂಟವು ಅಪೇಕ್ಷಿಸಿದಾಗ ಈ ಪ್ರತಿಯನ್ನು ಹಾಜರುಪಡಿಸಬೇಕು. **ಅಭ್ಯರ್ಥಿಗಳು ಅರ್ಜಿಗಳು ನಿಗದಿತ ಗಾತ್ರದಲ್ಲಿ ಅಂದರೆ ಕಡತದ ಗಾತ್ರ 100 ಕೆ.ಬಿ.ಗಿಂತ ಕಡಿಮೆ ಇರುವುದನ್ನು ಖಾತರಿಪಡಿಸಿಕೊಂಡು Upload ಮಾಡತಕ್ಕದ್ದು.** ಅಸ್ಪಷ್ಟ ಅರ್ಜಿಗಳನ್ನು ಯಾವುದೇ ಸೂಚನೆ ನೀಡದೆ ತಿರಸ್ಕರಿಸಲಾಗುವುದು.

**ಅಭ್ಯರ್ಥಿಗಳು On-Line ಮೂಲಕ ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳ ಪ್ರತಿಗಳನ್ನು ಅಪ್‌ಲೋಡ್ ಮಾಡತಕ್ಕದ್ದು. ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು / ದಾಖಲಾತಿಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಅಂದರೆ ದಿನಾಂಕ: 14-12-2025 ರ ಒಳಗಾಗಿ ಪಡೆದಿರಬೇಕು ಇಲ್ಲವೇ ಸಿಂಧುವಾಗಿರಬೇಕು ಹಾಗೂ ಒಕ್ಕೂಟವು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗುವುದು.**

1. ಕಡ್ಡಾಯವಾಗಿ ಹಾಜರುಪಡಿಸಬೇಕಾದ ವಿದ್ಯಾರ್ಹತೆ/ಅನುಭವ/ಜನ್ಮ ದಿನಾಂಕ ಹಾಗೂ ಅಗತ್ಯ ಪ್ರಮಾಣ ಪತ್ರಗಳನ್ನು ಹಾಜರುಪಡಿಸದಿದ್ದಲ್ಲಿ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.
2. ವಿವಿಧ ಮೀಸಲಾತಿ ಕೋರಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರುಪಡಿಸದಿದ್ದಲ್ಲಿ: ಆ ಮೀಸಲಾತಿಯನ್ನು ರದ್ದುಪಡಿಸಿ ಸಾಮಾನ್ಯ ಅರ್ಹತೆಯಲ್ಲಿ ಅರ್ಹತೆಯನ್ನು ಹೊಂದಿದ್ದಲ್ಲಿ ಮಾತ್ರ, ಸಾಮಾನ್ಯ ಅರ್ಹತೆಯ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.

**<u>ಮೀಸಲಾತಿ ಹಾಗೂ ವಯೋಮಿತಿ ವಿನಾಯಿತಿ ಕೋರಿದ್ದಲ್ಲಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು</u> :**

1. ಪರಿಶಿಷ್ಟ ಜಾತಿ ಪ್ರವರ್ಗ-ಎ, ಪರಿಶಿಷ್ಟ ಜಾತಿ ಪ್ರವರ್ಗ-ಬಿ, ಪರಿಶಿಷ್ಟ ಜಾತಿ ಪ್ರವರ್ಗ-ಸಿ ಮತ್ತು ಪರಿಶಿಷ್ಟ ಪಂಗಡ ಮೀಸಲಾತಿ ಕೋರುವ ಅಭ್ಯರ್ಥಿಯು ನಿಗದಿತ **ನಮೂನೆ-ಡಿ** ನಲ್ಲಿ ತಹಶೀಲ್ದಾರ್ ರವರಿಂದ ಪಡೆದಿರುವ ಪ್ರಮಾಣ ಪತ್ರ:- ಇದರ ನಮೂನೆ **ಅನುಬಂಧ-1(ಅ)** ರಲ್ಲಿ ನೀಡಲಾಗಿದೆ.
2. ಪ್ರವರ್ಗ-1, ಮೀಸಲಾತಿ ಕೋರುವ ಅಭ್ಯರ್ಥಿಯು ನಿಗದಿತ **ನಮೂನೆ-** ಇ ನಲ್ಲಿ ತಹಶೀಲ್ದಾರ್ ರವರಿಂದ ಪಡೆದಿರುವ ಪ್ರಮಾಣ ಪತ್ರ.:- ಇದರ ನಮೂನೆಗಳನ್ನು **ಅನುಬಂಧ-1(ಆ)** ರಲ್ಲಿ ನೀಡಲಾಗಿದೆ.
3. ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ಮೀಸಲಾತಿ ಕೋರುವ ಅಭ್ಯರ್ಥಿಯು ನಿಗದಿತ ನಮೂನೆ-ಎಫ್ ನಲ್ಲಿ ತಹಶೀಲ್ದಾರ್ ರವರಿಂದ ಪಡೆದಿರುವ ಪ್ರಮಾಣ ಪತ್ರ:- ಇದರ ನಮೂನೆ **ಅನುಬಂಧ-1 (ಇ)** ರಲ್ಲಿ ನೀಡಲಾಗಿದೆ.
4. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು ನಮೂನೆ-2:- ಇದರ ನಮೂನೆಗಳನ್ನು **ಅನುಬಂಧ-2** ರಲ್ಲಿ ನೀಡಲಾಗಿದೆ.
5. ಕನ್ನಡ ಮಾಧ್ಯಮ ಅಭ್ಯರ್ಥಿಗಳು ನಿಗದಿಪಡಿಸಿದ ನಮೂನೆಯಲ್ಲಿ ಪಡೆದ ಪ್ರಮಾಣ ಪತ್ರ:- ಇದರ ನಮೂನೆಯನ್ನು **ಅನುಬಂಧ-3** ರಲ್ಲಿ ನೀಡಲಾಗಿದೆ.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ

6. ಯೋಜನಾ ನಿರಾಶ್ರಿತ ಅಭ್ಯರ್ಥಿಗಳು ನಿಗದಿಪಡಿಸಿದ ನಮೂನೆ-3 ರಲ್ಲಿ ಪಡೆದ ಪ್ರಮಾಣ ಪತ್ರ:- ಇದರ ನಮೂನೆಯನ್ನು **ಅನುಬಂಧ-4** ರಲ್ಲಿ ನೀಡಲಾಗಿದೆ.
7. ಅಂಗವಿಕಲ ಅಭ್ಯರ್ಥಿಗಳು ನಿಗದಿಪಡಿಸಿದ ನಮೂನೆಯಲ್ಲಿ ಪಡೆದ ವೈದ್ಯಕೀಯ ಪ್ರಮಾಣ ಪತ್ರ:- ಇದರ ನಮೂನೆಯನ್ನು **ಅನುಬಂಧ-5** ರಲ್ಲಿ ನೀಡಲಾಗಿದೆ.
8. ಮಾಜಿ ಸೈನಿಕಾ ಪ್ರಮಾಣ ಪತ್ರ:- ಇದರ ನಮೂನೆಯನ್ನು **ಅನುಬಂಧ-6** ರಲ್ಲಿ ಹಾಗೂ ಮಾಜಿ ಸೈನಿಕರ ಅವಲಂಬಿತರಾಗಿದ್ದಲ್ಲಿ ನೀಡಬೇಕಾದ ಪ್ರಮಾಣ ಪತ್ರದ ನಮೂನೆಯನ್ನು **ಅನುಬಂಧ-6(ಎ) ರಲ್ಲಿ** ನೀಡಲಾಗಿದೆ.
9. ನಿರಾಕ್ಷೇಪಣಾ / ಅನುಮತಿ ಪತ್ರದ ನಮೂನೆ:- ಇದರ ನಮೂನೆಯನ್ನು **ಅನುಬಂಧ-7** ರಲ್ಲಿ ನೀಡಲಾಗಿದೆ.
10. ಸೇವಾನುಭವ ಪ್ರಮಾಣ ಪತ್ರ:- ಇದರ ನಮೂನೆಯನ್ನು **ಅನುಬಂಧ-8** ರಲ್ಲಿ ನೀಡಲಾಗಿದೆ.
11. ತೃತೀಯ ಲಿಂಗದ ಪ್ರಮಾಣ ಪತ್ರ- ಸರ್ಕಾರ ನಿಗದಿಪಡಿಸಿರುವ ನಮೂನೆಯ ರೀತ್ಯಾ
12. ಇಬ್ಬರು ಸ್ಥಳೀಯ ಗಣ್ಯ ವ್ಯಕ್ತಿಗಳಿಂದ (ಚುನಾಯಿತ ಪ್ರತಿನಿಧಿಗಳು ಅಥವಾ ಗೆಜೆಟೆಡ್ ಅಧಿಕಾರಿಗಳಿಂದ) ಪಡೆದ ನಡತೆ ಪ್ರಮಾಣ ಪತ್ರ

**<u>ಪ್ರಮುಖ ಸೂಚನೆಗಳು</u> :**

1. ಅಭ್ಯರ್ಥಿಗಳು Online ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಪರೀಕ್ಷೆಗೆ ಅರ್ಹರೆ ಎಂಬುದನ್ನು ಒಕ್ಕೂಟವು ಪರಿಶೀಲಿಸಿ ಮೇಲು ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಲಿಖಿತ ಪರೀಕ್ಷೆಗೆ ಕರೆ ಪತ್ರಗಳನ್ನು ನೀಡುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಅನುಭವ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.
2. ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಅನರ್ಹರೆಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ರದ್ದುಪಡಿಸುವ ಹಕ್ಕು ಒಕ್ಕೂಟವು ಹೊಂದಿರುತ್ತದೆ.
3. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ, ಅನುಭವ ಹಾಗೂ ವಯೋಮಿತಿ ಸಡಿಲಿಕೆ ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.
4. ಅಭ್ಯರ್ಥಿಗಳು ವಿದ್ಯಾರ್ಹತೆ, ಅನುಭವ, ಮೀಸಲಾತಿ, ವಯೋಮಿತಿ ಮುಂತಾದ ಅವಶ್ಯಕ ದಾಖಲೆಗಳನ್ನು ಸರ್ಕಾರಿ ಗೆಜೆಟೆಡ್ ಅಧಿಕಾರಿಗಳಿಂದ ದೃಢೀಕರಿಸಿ ಪ್ರತಿಗಳನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ. ಅಸ್ಪಷ್ಟ, ಅಪೂರ್ಣ, ಭಾವಚಿತ್ರ ಇಲ್ಲದ ಮತ್ತು ಅಭ್ಯರ್ಥಿಯು ಸಹಿ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
5. ಅಭ್ಯರ್ಥಿಗಳು Online ಮೂಲಕ ಸಲ್ಲಿಸಿರುವ ಮಾಹಿತಿ ಆಧಾರದಲ್ಲಿ ಶುಲ್ಕ ಪಾವತಿಸಿರುವ ಎಲ್ಲಾ ಅರ್ಹ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆ ಬರೆಯಲು ಅವಕಾಶ ನೀಡಲಾಗುವುದು. ನಿಗದಿಪಡಿಸಿರುವ ನಿರ್ದಿಷ್ಟ ವಿದ್ಯಾರ್ಹತೆ, ಅನುಭವ ಹೊಂದಿರುವ ಅಗತ್ಯ ದಾಖಲಾತಿಗಳನ್ನು ಸಲ್ಲಿಸದೇ ಇರುವ ಹಾಗೂ ತಪ್ಪು ಮಾಹಿತಿ / ಅಪೂರ್ಣ ಮಾಹಿತಿ ಸಲ್ಲಿಸುವ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ತಿರಸ್ಕರಿಸುವ ಹಕ್ಕನ್ನು ಒಕ್ಕೂಟವು ಹೊಂದಿರುತ್ತದೆ.
6. ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬೇಕಾದಲ್ಲಿ ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ **(No objection certificate)** ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಪಡೆದು ಸಲ್ಲಿಸತಕ್ಕದ್ದು. (ನಮೂನೆಯನ್ನು ನೇಮಕಾತಿ ಪ್ರಕಟಣೆಯ ಕೊನೆಯಲ್ಲಿ ಅನುಬಂಧದಲ್ಲಿ ನೀಡಲಾಗಿದೆ)

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ

7. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಪೋಟೊ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.
8. ಅಭ್ಯರ್ಥಿಗಳು ಅರ್ಜಿಗಳನ್ನು Online Upload ಮೂಲಕ ಮಾಡಿದ ನಂತರ ಸ್ಪಷ್ಟವಾಗಿ ಹಾಗೂ ನಿರ್ದಿಷ್ಟ ಗಾತ್ರದಲ್ಲಿ **Upload ಮಾಡಿರುವ ಬಗ್ಗೆ ಖಚಿತ ಪಡಿಸಿಕೊಳ್ಳುವುದು.**

**ವಿಶೇಷ ಸೂಚನೆ: ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮೊದಲು ಎಲ್ಲಾ ವಿವರಗಳನ್ನು ಓದಿ ಅರ್ಥೈಸಿಕೊಂಡು ಆನಂತರವೇ ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು. ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ವಿವರಗಳನ್ನು ತಿದ್ದುಪಡಿ / ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ತಿರಸ್ಕರಿಸಲಾಗುವುದು. ಅಭ್ಯರ್ಥಿಗಳು ವಯೋಮಿತಿ, ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಹಾಗೂ ಅರ್ಜಿಯಲ್ಲಿ ಕೋರಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಅಧಿಸೂಚನೆಯ ಅನುಬಂಧದಲ್ಲಿ ಸೂಚಿಸಿರುವ ನಮೂನೆಗಳಲ್ಲಿಯೇ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಸ್ಪಷ್ಟವಾದ ದಾಖಲೆಗಳನ್ನು ಅಪ್‌ಲೋಡ್ ಮಾಡತಕ್ಕದ್ದು. ಅಭ್ಯರ್ಥಿಗಳು ಅಪ್‌ಲೋಡ್ ಮಾಡುವ ದಾಖಲೆಗಳನ್ನು ಮಾತ್ರ ಪರಿಶೀಲನೆ ಮಾಡಲಾಗುವುದು. ತದ ನಂತರದಲ್ಲಿ ಮನವಿ ಮುಖಾಂತರ ಸಲ್ಲಿಸುವ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.**

ವ್ಯವಸ್ಥಾಪಕ ನಿರ್ದೇಶಕರು

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..
ಶಿವಮೊಗ್ಗ.-577222

ಶಿಮುಲ್

# ಅನುಬಂಧ – 1 (ಅ)

## (ಪ.ಜಾ.ಪ್ರ–ಎ, ಪ.ಜಾ.ಪ್ರ–ಬಿ, ಪ.ಜಾ.ಪ್ರ–ಸಿ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

## ನಮೂನೆ – ಡಿ

(ನಿಯಮ 3ಎ (2) (3) ನೋಡಿ)

**ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

## ಪ್ರಮಾಣ ಪತ್ರ

........................................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ................................. ಜಿಲ್ಲೆಯ / ವಿಭಾಗದ ........................................... ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ................................... ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ ................................. ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಿದೆ.

* ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951
* (ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)
* ಸಂವಿಧಾನ
* ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
* ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959
* ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
* ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
* ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988
* ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ........................................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ........................................................................................ರಾಜ್ಯ/ಕೇಂದ್ರಾಡಳಿತ ಪ್ರದೇಶದ ........................................................... ಜಿಲ್ಲಾ/ವಿಭಾಗದ ...................................ಗ್ರಾಮ/ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ..............................................................

ತಹಶೀಲ್ದಾರ್.............................................

ಸ್ಥಳ :

ಪದನಾಮ

ದಿನಾಂಕ:

ಕಛೇರಿಯ ಮೊಹರಿನೊಂದಿಗೆ

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ.,
ಶಿವಮೊಗ್ಗ.-577222

# ಅನುಬಂಧ–1 (ಅ)

(ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಇ

(ನಿಯಮ 3ಎ (2) (3) ನೋಡಿ)

**ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ**

------------------------------------------------------------ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ ------------------------------------------------ ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ -------------------------------------- ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ----------------------------ಜಾತಿಯ ---------------- ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣಿಕರಿಸಲಾಗಿದೆ.

ಸ್ಥಳ:

ದಿನಾಂಕ:

ತಹಶೀಲ್ದಾರ್

------------ತಾಲ್ಲೂಕು

ಕಛೇರಿಯ ಮೊಹರು

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..
ಶಿವಮೊಗ್ಗ.-577222

ಶಿಮುಲ್

# ಅನುಬಂಧ–1 (ಇ)

## (ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

## ನಮೂನೆ – ಎಫ್

(ನಿಯಮ 3ಎ (2) (3)ನ್ನು ನೋಡಿ)

**ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ**

__________________________ ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ____________________ ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ __________________ ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002 ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರೀಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

*ಅಥವಾ*

ಸಾರ್ವಜನಿಕ ವಲಯ ಉದ್ಯಮಯಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

*ಅಥವಾ*

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ.43100–83900) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

*ಅಥವಾ*

ಆತನ / ಆಕೆಯ ತಂದೆ ತಾಯಿ/ ಪೋಷಕರು / ಪತ್ನಿ / ಪತಿಯ ಆದಾಯವು ಎರಡು ಲಕ್ಷಮೀರುವುದಿಲ್ಲವೆಂದು;

*ಅಥವಾ*

ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯ ಆದಾಯವು 8 ಲಕ್ಷ ರುಪಾಯಿಗಳಿಗಿಂತ ಮೀರುವುದಿಲ್ಲವೆಂದು (ಸರ್ಕಾರಿ ಆದೇಶ ಸಂಖ್ಯೆ: ಹಿಂವಕ 304 ಬಿಸಿಎ/2017 ಬೆಂಗಳೂರು, ದಿನಾಂಕ 14.09.2018 ಅಥವಾ ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಶ್ರೀ / ಶ್ರೀಮತಿ / ಕುಮಾರಿ________________ಇವರು _______________ ಜಾತಿಗೆ ______________________ ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ _________________ (2ಎ, 2ಬಿ, 3ಎ, 3ಬಿ)ಕ್ಕೆ ಸೇರಿರುತ್ತಾರೆ. ಮತ್ತು ಈ ಕುಟುಂಬದ ವಾರ್ಷಿಕ ಆದಾಯವು ರೂ.(ರೂ.------------ಮಾತ್ರ) ಎಂದು ಪ್ರಮಾಣಿಕರಿಸಲಾಗಿದೆ.

ಸ್ಥಳ: ತಹಶೀಲ್ದಾರ್

ದಿನಾಂಕ: ____________ತಾಲ್ಲೂಕು

ಕಛೇರಿಯ ಮೊಹರು

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..,
ಶಿವಮೊಗ್ಗ.-577222

ಶಿಮುಲ್

## ಅನುಬಂಧ – 2

### ನಮೂನೆ – 1

### ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:

ತಹಶೀಲ್ದಾರರು

________________ತಾಲ್ಲೂಕು

________________ ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ ___________________________________ ಎಂಬುವವರ ಮಗ / ಮಗಳು / ಪತಿ / ಪತ್ನಿ ___________________________________ ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ :
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು
9. ಆದಾಯ ತೆರಿಗೆ ಪಾವತಿದಾರರೇ?
10. ಸಂಪತ್ತು ತೆರಿಗೆ ಪಾವತಿದಾರರೇ?
11. ಮಾರಾಟ ತೆರಿಗೆ ಪಾವತಿದಾರರೇ?

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ.,
ಶಿವಮೊಗ್ಗ.-577222

## ಪ್ರಮಾಣೀಕೃತ ಘೋಷಣೆ

**ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.**

ಸ್ಥಳ: ತಮ್ಮ ವಿಧೇಯ

ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣಿಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ

ಸ್ಥಳ: ತಂದೆ/ತಾಯಿ/ಪೋಷಕರ ಸಹಿ

**ದಿನಾಂಕ:** **(ತಂದೆ/ತಾಯಿ ಜೀವಂತವಿಲ್ಲದಿದ್ದರೆ)**

(ಹೆಂಡತಿ/ಗಂಡ/ಇವರ ಸಹಿ)

ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

### ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ಶ್ರೀಮತಿ ________________________________ ಎಂಬುವವರ ಮಗ/ ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ ______________________ ಎಂಬುವವರು ಕರ್ನಾಟಕ ರಾಜ್ಯದ __________ಜಿಲ್ಲೆಯ ವಿಭಾಗ ____________________ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ______________________ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ: ತಹಶೀಲ್ದಾರ್

ದಿನಾಂಕ: ____________ತಾಲ್ಲೂಕು

ಕಛೇರಿಯ ಮೊಹರು

**ಸೂಚನೆ-1 :** ಇದರಲ್ಲಿ ಉಪಯೋಗಿಸಲಾದ 'ಸಾಮಾನ್ಯ ನಿವಾಸಿ' ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

**ಸೂಚನೆ-2 :** ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..
ಶಿವಮೊಗ್ಗ.-577222

ಶಿಮುಲ್

## ಅನುಬಂಧ – 2

### ನಮೂನೆ – 2

### ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ______________________________ ರವರ ಮಗ/ ಮಗಳು/ ಪತಿ/ ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ______________________ ಜಿಲ್ಲೆ ____________________ ತಾಲ್ಲೂಕು_______________ ಗ್ರಾಮದಲ್ಲಿ _________________ ವಾಸವಾಗಿರುವ ಇವರು ಒಂದನೇ ತರಗತಿಯಿಂದ __________ ತರಗತಿಯವರೆಗೆ _____________ ಜಿಲ್ಲೆ ______________ ತಾಲ್ಲೂಕು___________ ಪಟ್ಟಣ__________________ ಶಾಲೆಯಲ್ಲಿ ವ್ಯಾಸಂಗ ಮಾಡಿ __________ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲು ರುಜು  
ಕ್ಷೇತ್ರ ಶಿಕ್ಷಣ ಅಧಿಕಾರಿ  
ಕಚೇರಿಯ ಮೊಹರು

ಸಹಿ  
ಮುಖ್ಯೋಪಾಧ್ಯಾಯರ ಸಹಿ  
ಮತ್ತು ಸಂಸ್ಥೆಯ ಮೊಹರು

ಸ್ಥಳ:  
ದಿನಾಂಕ:

ವ್ಯವಸ್ಥಾಪಕ ನಿರ್ದೇಶಕರು  
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ  
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..  
ಶಿವಮೊಗ್ಗ.-577222

ಶಿಮುಲ್

## ಅನುಬಂಧ – 3

## ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ / ಶ್ರೀಮತಿ........................................................... ರವರ ಮಗ/ಮಗಳು/ಪತಿ/ಪತ್ನಿ/ಶ್ರೀಮತಿ/ಕುಮಾರಿ ............................................. ಜಿಲ್ಲೆ .........................................ತಾಲ್ಲೂಕು ................................................ಗ್ರಾಮದಲ್ಲಿ ವಾಸವಾಗಿರುವ ಇವರು ................................ ನೇ ತರಗತಿಯಿಂದ ................................ ನೇ ತರಗತಿವರೆಗೆ ................................ ಶೈಕ್ಷಣಿಕ ವರ್ಷದಿಂದ ................................ ಶೈಕ್ಷಣಿಕ ವರ್ಷದವರೆಗೆ ........................................................... ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

| | |
|---|---|
| ಮೇಲು ರುಜು | ಸಹಿ |
| ಕ್ಷೇತ್ರ ಶಿಕ್ಷಣ ಅಧಿಕಾರಿ | ಮುಖ್ಯೋಪಾಧ್ಯಾಯರ ಸಹಿ |
| ಕಚೇರಿಯ ಮೊಹರು | ಮತ್ತು ಸಂಸ್ಥೆಯ ಮೊಹರು |

ಸ್ಥಳ:
ದಿನಾಂಕ:

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..
ಶಿವಮೊಗ್ಗ.-577222

ಶಿಮುಲ್

## ಅನುಬಂಧ – 4

ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 44 ಸೆನೆನಿ 2001 ದಿನಾಂಕ: 27.07.2001

### ನಮೂನೆ – 3

### ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿ

ಶ್ರೀ/ಶ್ರೀಮತಿ ________________________________________ ಎಂಬುವವರ ಮಗ/ ಮಗಳು/ ಪತಿ/ ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ_______________________ ಜಿಲ್ಲೆ ________________ ತಾಲ್ಲೂಕು___________ ಗ್ರಾಮದಲ್ಲಿ ವಾಸವಾಗಿರುವ ಇವರು : ಇವರ ಕುಟುಂಬದವರ ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು ______________________________ ಯೋಜನೆಗಾಗಿ _________________ ಇಸವಿಯಲ್ಲಿ ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಮಾಣೀಕರಿಸಿದೆ :-

(ಅ) * * ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು

(ಆ) * * ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ: ಯೋಜನೆಯಿಂದ ತಾವು ವಾಸಿಸುವ ಮನೆ :

(ಇ) * * ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ :

(ಈ) * * ಇತರ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

ಸ್ಥಳ: ತಹಶೀಲ್ದಾರ್

ದಿನಾಂಕ: ____________ತಾಲ್ಲೂಕು

ಕಛೇರಿಯ ಮೊಹರು

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..
ಶಿವಮೊಗ್ಗ.-577222

## ಅನುಬಂಧ – 5

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ: 19.11.2005

ಶಿಮುಲ್

# CERTIFICATE FOR THE PERSONS WITH DISABILITIES

This is to certify that Sri/ Smt / Kum ………………………………………………… son / wife / daughter of Shri ……………………………………………………………Age ………………………… old, male / female, Registration No …………………………… is a case of ……………………….. He / She is physically disabled/visual disabled/speech & hearing disabled and has …………………….. % (……………………percent) permanent (physical impairment visual impairment speech & hearing impairment) in relation to his / her ……………………………

**Note :**

1. This condition is progressive/non-progressive/likely to improve/not likely to improve. *
2. Re-assessment is not recommended/is recommended after a period of ………………… months/years. *

* Strike out which is not applicable

(Recent Attested
Photograph showing
the disability
affixed here)

| | | |
|---|---|---|
| Orthopedic / EYE / ENT / Psychiatrist Member, Medical Board | Senior Specialist Member, Medical Board | Chairperson District Surgeon District, District Hospital |

Signature / Thumb impression
of the disabled person

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..
ಶಿವಮೊಗ್ಗ.-577222

ಅನುಬಂಧ – 6

ಶಿಮುಲ್

## GOVERNMENT OF KARNATAKA

### DEPARTMENT OF SAINIK WELFARE AND RESETTLEMENT

Office of the Deputy Director, Department of Sainik Welfare & Resettlement
(Karnataka)

No.____________________

Date:______________

## ***CERTIFICATE***

This is to certify that Sri / Smt / Kum ____________________________
is an applicant for ____________________ is the Spouse / Son / Daughter of No________ Rank ________ Name ______________________________
of Army / Navy / Air Force, who is an Ex-Serviceman according to the definition laid down by the Minister of Defence, Government of India. He served from ______________ to ______________

The Ex-Serviceman had declared his home town in Karnataka at the time of entry into service as per records & hence eligible to avail reserved seats under Ex-Serviceman quota. His permanent home address at the time of entry into service was as under:

______________________________

______________________________

Signature of the Deputy Director
Department of Sainik Welfare & Resettlement
..............................................
District

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..
ಶಿವಮೊಗ್ಗ.-577222

ಅನುಬಂಧ – 6(ಎ)

## CERTIFICATE

This is to certify that Sri / Smt / Kum ______________________________ is an applicant for ________________________ is the Spouse / Son / Daughter of No________ Rank _________ Name ______________________________________ who Died / Disabled while in service according to the certificate issued by Defence Authority. He Died / Disabled on __________________

Home address of the individual at the time of joining Defence Service as per the records is:

______________________________________

______________________________________

Place:

Date:

Signature of the Deputy Director

Department of Sainik Welfare & Resettlement

..................................................

District

ವ್ಯವಸ್ಥಾಪಕ ನಿರ್ದೇಶಕರು

ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ

ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..

ಶಿವಮೊಗ್ಗ.-577222

## ಅನುಬಂಧ – 7

ಶಿಮುಲ್

**ಪ್ರಸ್ತುತವಾಗಿ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ನೇಮಕಾತಿ ಪ್ರಾಧಿಕಾರಿಗಳಿಂದ ಪಡೆಯಬೇಕಾದ ನಿರಾಕ್ಷೇಪಣಾ / ಅನುಮತಿ ಪತ್ರದ ನಮೂನೆ**

ಸಂಖ್ಯೆ.------------------------------ ದಿನಾಂಕ:-----------

## ನಿರಾಕ್ಷೇಪಣಾ / ಅನುಮತಿ ಪತ್ರ

ಶ್ರೀ / ಶ್ರೀಮತಿ........................................................ ತಂದೆ .............................................. ಇವರು ದಿನಾಂಕ ........................................ ರಿಂದ ................................................ ಸಂಸ್ಥೆಯಲ್ಲಿ ........................................................................................... ಹುದ್ದೆಯಲ್ಲಿ ಖಾಯಂ / ಹಂಗಾಮಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಸದರಿಯವರು ನೇಮಕಾತಿ ಅಧಿಸೂಚನೆ ಸಂಖ್ಯೆ: ಶಿಮುಲ್/ಆಡಳಿತ-1/ನೇ.ನೇ-370/ /2025-26 ದಿನಾಂಕ: -------- ಅಧಿಸೂಚನೆಯಂತೆ ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., ಶಿವಮೊಗ್ಗ ಇವರು ಆಹ್ವಾನಿಸಿರುವ ................................................ ಹುದ್ದೆಗೆ ಅರ್ಜಿ ಸಲ್ಲಿಸಲು ಈ ಸಂಸ್ಥೆ / ಇಲಾಖೆಯಿಂದ ಯಾವುದೇ ಆಕ್ಷೇಪಣೆ ಇರುವುದಿಲ್ಲ.

**ಪ್ರಸ್ತುತ ನೇಮಕಾತಿ ಪ್ರಾಧಿಕಾರಿಗಳ ಪದನಾಮ**
**ಮೊಹರು**

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ.,
ಶಿವಮೊಗ್ಗ.-577222

## ಅನುಬಂಧ – 8

## ಸೇವಾನುಭವ ಪ್ರಮಾಣ ಪತ್ರದ ನಮೂನೆ

ಶ್ರೀ / ಶ್ರೀಮತಿ.............................................................. ತಂದೆ / ಗಂಡ ................................................ ಇವರು ದಿನಾಂಕ ............................................ ರಿಂದ ........................................................ ರವರೆಗೆ (ಸಂಸ್ಥೆಯ ಹೆಸರು ಮತ್ತು ಪೂರ್ಣ ವಿಳಾಸ) ........................................ ಸಂಸ್ಥೆಯಲ್ಲಿ ............................................................ ಆಗಿ ಕಾರ್ಯನಿರ್ವಹಿಸಿರುತ್ತಾರೆ / ನಿರ್ವಹಿಸುತ್ತಿದ್ದಾರೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

ಈ ಅವಧಿಯಲ್ಲಿ ಸದರಿಯವರ ಸೇವೆಯು ತೃಪ್ತಿಕರವಾಗಿರುತ್ತದೆ.

ದಿನಾಂಕ:

ಸ್ಥಳ:

ಸಂಸ್ಥೆಯ ಮುಖ್ಯಸ್ಥರ ಸಹಿ:

ಮೊಹರು:

ಕಚೇರಿ ದೂರವಾಣಿ ಸಂಖ್ಯೆ:

**–***–**

ವ್ಯವಸ್ಥಾಪಕ ನಿರ್ದೇಶಕರು
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ..
ಶಿವಮೊಗ್ಗ.-577222